ಸಂಪುಟ 01 । ಸಂಚಿಕೆ 105 । ಮಂಗಳವಾರ 03 ಮಾರ್ಚ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ವನ್ಯಜೀವಿ ದಿನ (World Wildlife Day)**
ವಿಶ್ವ ವನ್ಯಜೀವಿ ದಿನವನ್ನು ಪ್ರತಿವರ್ಷ ಮಾರ್ಚ್ 3ರಂದು ಆಚರಿಸಲಾಗುತ್ತದೆ. ಈ ದಿನವನ್ನು ಗಟಿಣಜಜ Nations ಸಂಸ್ಥೆಯು 2013ರಲ್ಲಿ ಘೋಷಿಸಿತು.
ಒಪ್ಪಂದದ ಸ್ಮರಣಾರ್ಥ ಆಚರಿಸಲಾಗುತ್ತದೆ.

**2)ವಿಶ್ವ ಶ್ರವಣ ದಿನ**
ವಿಶ್ವ ಶ್ರವಣ ದಿನವನ್ನು ಪ್ರತಿವರ್ಷ ಮಾರ್ಚ್ 3ರಂದು ಆಚರಿಸಲಾಗುತ್ತದೆ. ಈ ದಿನವನ್ನು World Health Organization (WHO) ಜಾಗತಿಕವಾಗಿ ಆಚರಿಸಲು ಪ್ರಾರಂಭಿಸಿದೆ. ಇದರ ಉದ್ದೇಶ ಕಿವಿ ಮತ್ತು ಶ್ರವಣ ಆರೋಗ್ಯದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು

**3) ಪುಟ್ಟರಾಜ ಗವಾಯಿರವರ ಜನ್ಮದಿನ**
ಪಂಡಿತ್ ಪುಟ್ಟರಾಜ ಗವಾಯಿ ಅವರು ಕನ್ನಡನಾಡಿನ ಪ್ರಸಿದ್ಧ ಸಂಗೀತಗಾರರು, ದಾಸಸಾಹಿತ್ಯ ಪರಂಪರೆಯ ಹರಿಕಾರರು ಮತ್ತು ಸಮಾಜಸೇವಕರಾಗಿದ್ದರು.

ಇವರು ಮಾರ್ಚ್ 3, 1914 ಹಾವೇರಿ ಜಿಲ್ಲೆಯ ದೇವಗಿರಿ ಗ್ರಾಮದಲ್ಲಿ ಜನಿಸಿದರು. ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ, ದಾಸಸಾಹಿತ್ಯ
ಗೌರವಗಳು: ಪದ್ಮಭೂಷಣ ಸೇರಿದಂತೆ ಅನೇಕ ಪ್ರಶಸ್ತಿಗಳು
ಅವರು ಕಣ್ಣಿನ ದೋಷ ಹೊಂದಿದ್ದರೂ, ತಮ್ಮ ಅದ್ಭುತ ಸಂಗೀತ ಪ್ರತಿಭೆಯಿಂದ ದೇಶ–ವಿದೇಶಗಳಲ್ಲಿ ಖ್ಯಾತಿ ಪಡೆದರು. ಗದಗದಲ್ಲಿರುವ ವೀರೇಶ್ವರ ಪುಣ್ಯಾಶ್ರಮದ ಮೂಲಕ ಅನೇಕ ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಉಚಿತ ಸಂಗೀತ ಶಿಕ್ಷಣ ನೀಡಿದರು

## ಸುಭಾಷಿತ

ಪ್ರತಿಸ್ಪರ್ಧಿಗಳಿಂದ ಆಗುವ ಪರಾಜಯ ನಿಜವಾದ
ಸೋಲಲ್ಲ; ನಮ್ಮಲ್ಲಿ, ನಮ್ಮ ಶ್ರದ್ಧೆಯಲ್ಲಿ ನಮಗೆ
ನಂಬಿಕೆ ಹೋಗುವುದು ನಿಜವಾದ ಸೋಲು.

– ತ ರಾ ಸು

ನೈಜ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಆಯುಷ್ಮಾನ್ ಭಾರತ್ ಯೋಜನೆಯಡಿ ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ಸೌಲಭ್ಯ: ಡಾ.ಸುರೇಂದ್ರ ಬಾಬು




❑ ನೈಜ್ಯ ದೇಸೆ ನ್ಯೂಸ್

ರಾಯಚೂರು ಮಾರ್ಚ್ 02 (ಕರ್ನಾಟಕ ವಾರ್ತೆ): ಕಡು ಬಡವರು, ಆರ್ಥಿಕ ದುರ್ಬಲ ವರ್ಗದವರು, ದೈನಂದಿನ ದುಡಿಮೆಯಿಂದಲೇ ಜೀವನ ನಿರ್ವಹಣೆ ಮಾಡಬೇಕಾದ ಕುಟುಂಬಗಳು ತುರ್ತು ಶಸ್ತ್ರಚಿಕಿತ್ಸೆಗಾಗಿ ಗುಣಮಟ್ಟದ ಆರೋಗ್ಯ ಚಿಕಿತ್ಸೆಯನ್ನು ಪಡೆಯಲು ಸಹಾಯಕವಾಗುವಂತೆ ಭಾರತ ಸರಕಾರ ಹಾಗೂ ಕರ್ನಾಟಕ ಸರಕಾರ ಜಂಟಿಯಾಗಿ ಒಟ್ಟು 1650 ವಿವಿಧ ಚಿಕಿತ್ಸಾ ವಿಧಾನಗಳಿಗೆ ಉಚಿತ ಚಿಕಿತ್ಸೆಯನ್ನು ಆಯುಷ್ಮಾನ್ ಭಾರತ– ಪ್ರಧಾನಮಂತ್ರಿ ಜನಾರೋಗ್ಯ ಯೋಜನಾ– ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ (ಎಬಿ–ಪಿಎಮ್ಜೆವೈ–ಸಿಎಮ್–ಆರ್ಕೆ) ಯೋಜನೆಯಡಿ ಫಲಾನುಭವಿಗಳಿಗೆ ಉಚಿತ ಚಿಕಿತ್ಸೆಯನ್ನು ಒದಗಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಕೋರಿದ್ದಾರೆ.

ಹೃದಯ ಸಂಬಂಧಿ, ಮೂತ್ರಪಿಂಡ, ಕಿಡ್ನಿ, ಕ್ಯಾನ್ಸ್, ಸುಟ್ಟಗಾಯಗಳು, ಗಂಭಿರ ಅಪಘಾತ, ಕಾಕ್ಲಿಯರ್ ಇಂಪ್ಲಾಂಟ್ ಅಳವಡಿಕೆ, ಮೊಣಕಾಲು, ಸೊಂಟದ ಬದಲಿ ಚಿಕಿತ್ಸೆಯು ಸೇರಿದಂತೆ ಗಂಭೀರ ಖಾಯಿಲೆಗಳಿಗೆ ಒಟ್ಟು 1650 ವಿವಿಧ ಚಿಕಿತ್ಸಾ ವಿಧಾನಗಳಿಗೆ ಜಿಲ್ಲೆಯ ಎಲ್ಲ ಸರಕಾರಿ ಆರೋಗ್ಯ ಕೇಂದ್ರಗಳಲ್ಲಿ ಸೇವೆ, ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಸರಕಾರದೊಂದಿಗೆ ಒಡಂಬಡಿಕೆ ಮಾಡಿಕೊಂಡ ನೋಂದಾಯಿತ ಖಾಸಗಿ ಆಸ್ಪತ್ರೆಗಳ ಮೂಲಕ ಫಲಾನುಭವಿಗಳಿಗೆ ಉಚಿತ ಚಿಕಿತ್ಸೆಯನ್ನು ಒದಗಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಇತ್ತೀಚೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಜಿ. ಕುಮಾರ ನಾಯಕ ಅವರ ಅಧ್ಯಕ್ಷತೆಯ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದೀಶಾ) ಸಭೆಯಲ್ಲಿ ಸಂಸದರು ಸೂಚಿಸಿದಂತೆ ಈಗಾಗಲೇ ಯೋಜನೆಯ ಕುರಿತು ಜನತೆಗೆ ಸಿಬ್ಬಂದಿಯವರ ಮೂಲಕ ಮಾಹಿತಿ ನೀಡಲಾಗುತ್ತಿದ್ದು, ಜಿಲ್ಲೆಯ ಪ್ರತಿ ನಾಗರಿಕರು ಯೋಜನೆಯಡಿ ಸೌಲಭ್ಯ ಪಡೆದು ಆರ್ಥಿಕ ಹೊರೆಯಿಂದ ಮುಕ್ತರಾಗಲು ಸದುಪಯೋಗಕ್ಕಾಗಿ ವಿನಂತಿಸಿದ್ದಾರೆ.

ಯೋಜನೆಯಡಿ ತಜ್ಞತೆಯ ಚಿಕಿತ್ಸಾ ಸೌಲಭ್ಯ: ತುರ್ತು ಸಂದರ್ಭಗಳಲ್ಲಿ 169 ಚಿಕಿತ್ಸಾ ವಿಧಾನ ಸೌಲಭ್ಯ, ಗಂಭೀರ ಆರೋಗ್ಯ ಸಮಸ್ಯೆಗಳಿಗೆ 900 ಚಿಕಿತ್ಸಾ ವಿಧಾನ ಸೌಲಭ್ಯ, ದ್ವಿತೀಯ ಹಂತದ 254 ಚಿಕಿತ್ಸಾ ವಿಧಾನಗಳು, ಪ್ರಾಥಮಿಕ ಹಂತದ 40 ಚಿಕಿತ್ಸಾ ವಿಧಾನ ಸೇರಿದಂತೆ ಒಟ್ಟು 1650 ವಿವಿಧ ಚಿಕಿತ್ಸಾ ವಿಧಾನಗಳನ್ನು ಉಚಿತವಾಗಿ ಒದಗಿಸಲಾಗುವುದು.

ಯೋಜನೆಯ ಫಲಾನುಭವಿಗಳು: ಬಿಪಿಎಲ್ ಕಾರ್ಡ್ ಹೊಂದಿದ ಕುಟುಂಬದ ಸದಸ್ಯರಿಗೆ ವಾರ್ಷಿಕ ರೂಪಾಯಿ 5 ಲಕ್ಷಗಳ ವರೆಗೆ ಉಚಿತ ಚಿಕಿತ್ಸಾ ವೆಚ್ಚ ಭರಿಸಲಾಗುವುದು. ಎಪಿಎಲ್ ಕಾರ್ಡ್ದಾರರಿಗೆ ವಾರ್ಷಿಕ ರೂಪಾಯಿ ಒಂದು ಲಕ್ಷ ಐವತ್ತು ಸಾವಿರಗಳ ವರೆಗೆ ಉಚಿತ ಚಿಕಿತ್ಸಾ ವೆಚ್ಚದ ಸೌಲಭ್ಯವಿದೆ.

ಆಸ್ಪತ್ರೆಗಳ ವಿವರ, ದೊರೆಯುವ ಸೌಲಭ್ಯ: ರಾಯಚೂರಿನ ನವೋದಯ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ, ಸಾಮಾನ್ಯ ಶಸ್ತ್ರಚಿಕಿತ್ಸೆ, ಕಣ್ಣಿನ ತೊಂದರೆ, ಎಲುಬು ಕೀಲು, ಕಿವಿ ಮೂಗು ಗಂಟಲು ತಜ್ಞರು, ಪ್ರಸೂತಿ ತಜ್ಞತೆ, ಮೂತ್ರ ಪಿಂಡ ಕಾಯಿಲೆಗೆ ಚಿಕಿತ್ಸೆ ನೀಡಲಾಗುವುದು.ಹೊಸಮನಿ ಆಸ್ಪತ್ರೆಯಲ್ಲಿ ಪ್ರಸೂತಿ ತಜ್ಞರು, ವಿಜಯ ಪಾಲಿ ಕ್ಲಿನಿಕ್ ಮತ್ತು ನರ್ಸಿಂಗ್ ಹೋಮ್‌ನಲ್ಲಿ ಹೃದಯ ರೋಗ ಚಿಕಿತ್ಸೆ, ಬೆಟ್ಟದೂರ ಆಸ್ಪತ್ರೆಯಲ್ಲಿ ಹೃದಯ ರೋಗ ಚಿಕಿತ್ಸೆ, ಧರಣಿ ಆಸ್ಪತ್ರೆಯಲ್ಲಿ ಹೃದಯ ರೋಗ ಚಿಕಿತ್ಸೆ, ಎಮ್.ಕೆ ಭಂಡಾರಿ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ, ಸಾಮಾನ್ಯ ಶಸ್ತ್ರಚಿಕಿತ್ಸೆ, ಕಣ್ಣಿನ ತೊಂದರೆ, ಚಿಕಿತ್ಸೆ, ಎಲುಬು ಕೀಲು ತಜ್ಞತೆ, ಪ್ರಸೂತಿ ತಜ್ಞತೆ, ಕ್ಯಾನ್ಸರ್ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ದಂತ ಚಿಕಿತ್ಸೆ, ಮೊಣಕಾಲು ಬದಲಿ/ಸೊಂಟ ಬದಲಿ ಶಸ್ತ್ರ ಚಿಕಿತ್ಸೆ ನಂದಿನಿ ಆಸ್ಪತ್ರೆಯಲ್ಲಿ ಸಾಮಾನ್ಯ ಶಸ್ತ್ರ ಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಮೂತ್ರ ಪಿಂಡ ಕಾಯಿಲೆಗೆ ಚಿಕಿತ್ಸೆ ಹಾಗೂ ಮಾನ್ವಿಯ ಅಶ್ವಿನಿ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ, ಸಾಮಾನ್ಯ ಶಸ್ತ್ರ ಚಿಕಿತ್ಸೆ, ಎಲುಬು ಕೀಲು ತಜ್ಞತೆ, ಸಿಂಧನೂರಿನ ಶ್ರೀ ರೇಣುಕಾ ಆಸ್ಪತ್ರೆಯಲ್ಲಿ ಸ್ತ್ರೀರೋಗ ತಜ್ಞತೆ, ಸಾಮಾನ್ಯ ಔಷಧಿ ಚಿಕಿತ್ಸೆ, ಸಾಮಾನ್ಯ ಶಸ್ತ್ರಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಮೂತ್ರಪಿಂಡ ಕಾಯಿಲೆಗೆ ಚಿಕಿತ್ಸೆ, ಶಾಂತಿ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ, ಸಾಮಾನ್ಯ ಶಸ್ತ್ರಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಮೂತ್ರಪಿಂಡ ಕಾಯಿಲೆಗೆ ಚಿಕಿತ್ಸೆ, ಆದರ್ಶ ಆಸ್ಪತ್ರೆಯಲ್ಲಿ ಸ್ತ್ರೀ ರೋಗ ತಜ್ಞತೆ, ಸಾಮಾನ್ಯ ಔಷಧಿ ಚಿಕಿತ್ಸೆ, ಸಾಮಾನ್ಯ ಶಸ್ತ್ರಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಕೇರ್ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ, ಸಹನಾ ಆಸ್ಪತ್ರೆಯಲ್ಲಿ ಮಕ್ಕಳ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ, ವೀರ ಗಂಗಾಧರ ಆಸ್ಪತ್ರೆಯಲ್ಲಿ ಸ್ತ್ರೀರೋಗ ತಜ್ಞತೆ, ಸಾಮಾನ್ಯ ಔಷಧಿ ಚಿಕಿತ್ಸೆ, ಸಾಮಾನ್ಯ ಶಸ್ತ್ರ ಚಿಕಿತ್ಸೆ ಹಾಗೂ ಮಸ್ಕಿಯ ಅನ್ನಪೂರ್ಣ ಆಸ್ಪತ್ರೆಯಲ್ಲಿ ಎಲುಬು ಕೀಲು ಚಿಕಿತ್ಸೆ ಮಾಡಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಖಾಲಿ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲು ಒತ್ತಾಯಿಸಿ ಧರಣಿ

❑ ನೈಜ್ಯ ದೇಸೆ ನ್ಯೂಸ್

ರಾಯಚೂರು : ರಾಜ್ಯ ಸಚಿವ ಸಂಪುಟ ಅನುಮೋದಿಸಿರುವ 56,432 ಹುದ್ದೆಗಳ ಭರ್ತಿಗೆ ಕೂಡಲೇ ಅಧಿಸೂಚನೆ ಹೊರಡಿಸಬೇಕು ಎಂದು ಒತ್ತಾಯಿಸಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯಿಂದ ನಗರದ ಡಾ.ಬಿ.ಆರ್ ಅಂಬೇಡ್ಕರ್ ವೃತ್ತದಲ್ಲಿ ಸೋಮವಾರ ಧರಣಿ ನಡೆಯಿತು.ರಾಜ್ಯದಲ್ಲಿ ಖಾಲಿ ಇರುವ 2,84,881 ಹುದ್ದೆಗಳಲ್ಲಿ 56,432 ಹುದ್ದೆಗಳಿಗೆ ಯಾವುದೇ ವಿಳಂಬವಿಲ್ಲದೆ ಅಧಿಸೂಚನೆ ಹೊರಡಿಸಬೇಕು.ಶಿಕ್ಷಕರ ಹುದ್ದೆಯನ್ನು ನಾಶಮಾಡುವ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯನ್ನು ಕೈಬಿಡಬೇಕು ಎಂದು ಧರಣಿನಿರತರು ಒತ್ತಾಯಿಸಿದರು.ಜಿಲ್ಲೆಯಲ್ಲಿ ಖಾಲಿ ಇರುವ 5000ಕ್ಕೂ ಹೆಚ್ಚು ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರನ್ನು ಹಾಗೂ ಚಿತ್ರಕಲಾ,




ಸಂಗೀತ, ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕು. ಪ್ರತೀ ವರ್ಷ ಖಾಲಿಯಾಗುವ ಹುದ್ದೆಗಳ ಭರ್ತಿಗೆ ವಾರ್ಷಿಕ ಕ್ಯಾಲೆಂಡರ್ ಅನ್ನು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಕೇಂದ್ರದ 78 ಇಲಾಖೆಗಳಲ್ಲಿ ಖಾಲಿ ಇರುವ 9.79 ಲಕ್ಷ ಹುದ್ದೆಗಳ ಭರ್ತಿಗೆ ಕೂಡಲೆ ಕ್ರಮ ಕೈಗೊಳ್ಳಬೇಕು. ಸರ್ಕಾರಿ ವೆಚ್ಚ ಕಡಿತ ಮಾಡುವ ಹೆಸರಿನಲ್ಲಿ ಜಾರಿಗೊಳಿಸಲಾಗಿರುವ ಫಿಸ್ಕಲ್ ರೆಸ್ಪಾನ್ಸಿಬಿಲಿಟಿ ಅಂಡ್ ಬಜೆಟ್ ಮ್ಯಾನೇಜ್ಮೆಂಟ್(ಎಫ್. ಆರ್. ಬಿ. ಎಂ) ಕಾಯ್ದೆಯನ್ನು ರದ್ದುಗೊಳಿಸಬೇಕು. ರಾಜ್ಯದಲ್ಲಿ ಹಾರ್ನಳ್ಳಿ ರಾಮಸ್ವಾಮಿ ವೀರಪ್ಪ ಮೊಗಲಿ ಮತ್ತು ದೇಶಪಾಂಡೆ ನೇತೃತ್ವದ ಎ. ಆರ್. ಸಿ ಶಿಫಾರಸುಗಳನ್ನು ಕೈಬಿಡಬೇಕು ಎಂದು ಮನವಿ ಮಾಡಿದರು. ನೇಮಕಾತಿ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಇರಬೇಕು ಮತ್ತು ಎಲ್ಲಾ ತೆರನಾದ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಬೇಕು. ನೇಮಕಾತಿಗಳಲ್ಲಿ ದುಬಾರಿ ಅರ್ಜಿ ಶುಲ್ಕ ಕೈಬಿಡಬೇಕು ಹಾಗೂ ಅಭ್ಯರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು. ಉದ್ಯೋಗಾವಕಾಶ ದೊರೆಯುವವರಿಗೆ ಗೌರವಯುತ ಜೀವನ ನಡೆಸಲು ಸೂಕ್ತವಾದ ನಿರುದ್ಯೋಗ ಭತ್ತೆ ನೀಡಬೇಕು ಎಂದು ಒತ್ತಾಯಿಸಿದರು.ಕೆಪಿಎಸ್ ಸಿಯಲ್ಲಿನ ಅಕ್ರಮ ತಡೆಗಟ್ಟಲು ರಾಜ್ಯ ಸರ್ಕಾರ ಹೋಟ ಸಮಿತಿ ಶಿಫಾರಸ್ಸುಗಳನ್ನು ಜಾರಿಗೊಳಿಸಬೇಕು. ಸರಕಾರಿ ಸಂಸ್ಥೆಗಳ ಖಾಸಗೀಕರಣ ನೀತಿಯನ್ನು ರದ್ದುಗೊಳಿಸಬೇಕು. ಗುತ್ತಿಗೆ ಪದ್ಧತಿಯನ್ನು ರದ್ದುಗೊಳಿಸಬೇಕು, ಖಾಯಂ ನೇಮಕಾತಿಗಳನ್ನು ಮಾಡಬೇಕು ಎಂದು ಆಗ್ರಹಿಸಿದರು.ಧರಣಿಯಲ್ಲಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯ ರಾಜ್ಯ ಸಂಚಾಲಕ ಚನ್ನಬಸವ ಜಾನೇಕಲ್, ಜಿಲ್ಲಾ ಘಟಕದ ಅಧ್ಯಕ್ಷ ಹನುಮಂತ ಕುರ್ಡಿ, ಜಿಲ್ಲಾ ಜಂಟಿ ಕಾರ್ಯದರ್ಶಿ ಶಿವಪ್ಪ ಅಸ್ಕಿಹಾಳ್, ವಿನೋದ ಕುಮಾರ, ಉದ್ಯೋಗ ಆಕಾಂಕ್ಷಿಗಳಾದ ಅಶೋಕ, ಮೌನೇಶ, ಕೃಷ್ಣ, ಸಂತೋಷ ಸಾಗರ್, ಶರಣಬಸವ, ರವಿ, ಜಮಶೇರ್, ಮೋಹನ, ಸಣ್ಣ ಬಸವ, ಮಂಜುನಾಥ, ಶ್ರೀಕಾಂತ್, ಶಾಂತಕುಮಾರ್, ಶಹಬಾಝ್ ಪಾಲ್ಗೊಂಡಿದ್ದರು.

# ವಿಶ್ವ ಚೇತನ ವಿದ್ಯಾಸಂಸ್ಥೆಯಲ್ಲಿ ವಿಜ್ಞಾನ ದಿನಾಚರಣೆ ವೈಜ್ಞಾನಿಕ ಮನೋಭಾವ ಬೆಳೆಸಲು ವಿಜ್ಞಾನ ದಿನಾಚರಣೆ ಸಹಕಾರಿ: ಗೀತಾ ಹಿರೇಮಠ






❑ ನೈಜ್ಯ ದೇಸೆ ನ್ಯೂಸ್

ಮಾನ್ವಿ : ವಿಜ್ಞಾನದ ಹೊಸ ಹೊಸ ಸಂಶೋಧನೆಗಳನ್ನು ತಿಳಿದುಕೊಳ್ಳುವುದರ ಜೊತೆಗೆ ವಿದ್ಯಾರ್ಥಿಗಳು ಸಂಸ್ಕಾರಯುತ ಶಿಕ್ಷಣ ಪಡೆದು ಭವಿಷ್ಯದಲ್ಲಿ ದೇಶದ ಉತ್ತಮ ನಾಗರಿಕರಾಗಬೇಕು ಎಂದು ವಿಶ್ವ ಚೇತನ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಗೀತಾ ಹಿರೇಮಠ ಹೇಳಿದರು. ಅವರು ವಿಶ್ವ ಚೇತನ ವಿದ್ಯಾಸಂಸ್ಥೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸಲು ಸಹಕಾರಿ ಆಗುತ್ತವೆ ಎಂದು ತಿಳಿಸಿದರು. ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಎಂ.ಎಂ. ಹಿರೇಮಠ ಮಾತನಾಡಿ, ವಿಜ್ಞಾನ ಮತ್ತು ತಂತ್ರಜ್ಞಾನದ ಅಭಿವೃದ್ಧಿಯಿಂದ ಜಗತ್ತು ಬಹಳ ಹತ್ತಿರವಾಗಿದೆ. ಸರ್ ಸಿ.ವಿ. ರಾಮನ್ ಅವರ ರಾಮನ್ ಪರಿಣಾಮದ ಆವಿಷ್ಕಾರದಿಂದ ವಿಶ್ವ ಭಾರತದತ್ತ ತಿರುಗಿ ನೋಡುವಂತಾಯಿತು ಎಂದು ಅವರ ಸಾಧನೆಯನ್ನು ಸ್ಮರಿಸಿದರು. ವಿಜ್ಞಾನ ಶಿಕ್ಷಕಿ ಗಾಯತ್ರಿ ಮಾತನಾಡಿ, ಸರ್ ಸಿ.ವಿ. ರಾಮನ್ ಅವರ ಜೀವನ ಮತ್ತು ಅವಿಷ್ಕಾರಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ವಿಜ್ಞಾನ ಶಿಕ್ಷಕಿ ಅಪ್ಸರಾ ವಿದ್ಯಾರ್ಥಿಗಳು ತಯಾರಿಸಿದ ವೈಜ್ಞಾನಿಕ ಮಾದರಿಗಳ ಕುರಿತು ವಿವರಿಸಿದರು. ಇಂಜಿನಿಯರಿಂಗ್ ವಿದ್ಯಾರ್ಥಿನಿ ನಿವೇದಿತಾ ವಿದ್ಯಾರ್ಥಿಗಳು ವಿಜ್ಞಾನದಲ್ಲಿ ಆಸಕ್ತಿ ಬೆಳೆಸಿಕೊಳ್ಳುವ ಅಗತ್ಯವನ್ನು ತಿಳಿಸಿದರು. ವಿದ್ಯಾರ್ಥಿನಿ ದ್ರಾಕ್ಷಾಯಣಿ ರಾಮನ್ ಪರಿಣಾಮದ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದ ಆರಂಭದಲ್ಲಿ ವಿದ್ಯಾರ್ಥಿನಿ ಚಿನ್ಮಯಿ ಹಿರೇಮಠ ಪ್ರಾರ್ಥಿಸಿದರು. ಶಿಕ್ಷಕಿ ಮಾಧುರಿ ಸ್ವಾಗತಿಸಿದರು. ಮುಖ್ಯಗುರು ನಂದಿತಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಅಂಗವಾಗಿ ರಸಪ್ರಶ್ನೆ ಹಾಗೂ ವಿವಿಧ ಸ್ಪರ್ಧೆಗಳಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.ಈ ಸಂದರ್ಭದಲ್ಲಿ ಶಿಕ್ಷಕರಾದ ಅಕ್ಷತಾ, ಚೈತ್ರಾ, ಸುಮೀರಾ, ಬಸಮ್ಮ ಉಪಸ್ಥಿತರಿದ್ದರು. ಸುನಿತಾ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿ ಅನಿತಾ ವಂದಿಸಿದರು.

## ಸಾಹಿತ್ಯ ಸಿಂಚನ

ಪುಟ್ಟರಾಜ್ ಗವಾಯಿ

ಗದಗದ ಮಣ್ಣಿನ ಗರ್ಭದಿಂದ ಮೂಡಿದ
ಗಾನಗಂಗೆಯ ಧ್ವನಿ,
ಅದು ಪುಟ್ಟರಾಜರ ಕಂಠದಲ್ಲಿ ಹರಿದ ದಿವ್ಯ
ನಾದವಾಣಿ.

ಕಣ್ಣುಗಳ ಕತ್ತಲೆಯನ್ನೇ ಜಯಿಸಿದ ಜ್ಯೋತಿ ಅವರು,
ಸಂಗೀತವೇ ದೈವವೆಂದು ಬದುಕಿದ ಮಹಾ
ತಪಸ್ವಿಗಳು.

ವೀಣೆಯ ತಂತಿಗಳಲ್ಲಿ ಅವರ ಸ್ಪರ್ಶವಿದ್ದಾಗ,
ಭಕ್ತಿ ಭಾವನೆಗಳು ಹೃದಯದಲ್ಲಿ ಅರಳಿದವು.

ಹಿಂದೂಸ್ತಾನಿ ರಾಗಗಳ ಹೊನಲು ಚೆಲ್ಲಿದಾಗ,
ಭಾವಸಾಗರದಲ್ಲಿ ಜನಮನ ಮಿಂದೆದ್ದಿತು.
ಅಂಧತ್ವವಿದ್ದರೂ ಅಂತರಂಗದ ದೃಷ್ಟಿ ಅಪಾರ,
ಜ್ಞಾನ–ಸಂಗೀತದ ದೀಪ ಹಚ್ಚಿದ ಮಹೋನ್ನತ ಚರಿತ್ರೆ

ವಿದ್ಯಾರ್ಥಿಗಳಲ್ಲಿ ಕಲೆಗೂ ಜೀವನಕ್ಕೂ ಮೌಲ್ಯ ಬಿತ್ತಿ,
ಸಂಗೀತವೇ ಮಾನವತೆಗೆ ಸೇತುವೆ ಎಂದು ಸಾರಿದರು.

ಕೇವಲ ಗಾಯಕರಲ್ಲ, ಸಮಾಜದ ದಾರಿದೀಪ,
ಅನಾಥರ ಪಾಲಿಗೆ ಕರುಣೆಯ ಕಲ್ಪವೃಕ್ಷ.
ಗಾನಯೋಗಿ, ಭಕ್ತಿಯ ರೂಪ, ಸಂಸ್ಕೃತಿಯ ಶಿಖರ,
ಪುಟ್ಟರಾಜರ ಹೆಸರು ಕನ್ನಡ ನಾಡಿನ ಅಮರ.

ನಾದಬ್ರಹ್ಮನಾಗಿ ಉಳಿದ ಅವರ ಸ್ಮೃತಿ,
ಯುಗಯುಗಾಂತರಗಳಿಗೂ ಪ್ರೇರಣೆಯ ಸಂಗೀತಧ್ವನಿ.

– ರವಿಕುಮಾರ್

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಕೆ.ಗುಡದಿನ್ನಿ ಗ್ರಾಮದಲ್ಲಿ ಎನ್.ಎಸ್.ಎಸ್. ವಿಶೇಷ ಶಿಬಿರ



ನೈಜ್ಯ ದೆಸೆ ನ್ಯೂಸ್

ಜನಪದ ಸಾಹಿತ್ಯ ನಮ್ಮ ಶ್ರೇಷ್ಠ ಸಂಸ್ಕೃತಿಯ ಸಂಪತ್ತು – ರಮೇಶಬಾಬು ಯಾಳಗಿ

ಮಾನ್ವಿ– ಮುಂದಿನ ಪೀಳಿಗೆಗೆ ಮಾರ್ಗದರ್ಶನ ಮಾಡುವ ಜನಪದ ಸಾಹಿತ್ಯ ನಮ್ಮ ಸಂಸ್ಕೃತಿಯ ಜೀವಂತ ಸಂಪತ್ತು ಎಂದು ಸಾಹಿತಿ ರಮೇಶಬಾಬು ಯಾಳಗಿ ಹೇಳಿದರು.ಅವರು ಸಿರವಾರ ತಾಲೂಕಿನ ಕೆ.ಗುಡದಿನ್ನಿ ಗ್ರಾಮದಲ್ಲಿ ಮಾನ್ವಿ ಪಟ್ಟಣದ ಕಲ್ಮಠದ ಕೆ.ಪಿ.ಎಸ್. ಎಸ್. ಪದವಿ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಘಟಕ ಆಯೋಜಿಸಿರುವ 2025–26 ನೇ ಸಾಲಿನ ವಿಶೇಷ ಶಿಬಿರದಲ್ಲಿ "ಜನಪದ ಸಾಹಿತ್ಯದ ಪ್ರಸ್ತುತತೆ " ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿದರು.ಸಾಮಾಜಿಕ ಬಾಂಧವ್ಯ ಬಲಪಡಿಸುವ ಸಾಧನವಾಗಿರುವ ಮೌಖಿಕ ಪರಂಪರೆಯ ಮೂಲಕ ಹರಿದು ಬಂದ ಈ ಜನಪದ ಹಾಡುಗಳು ಗ್ರಾಮೀಣ ಬದುಕಿನ ನೈಜ ಪ್ರತಿಫಲನಗಳಾಗಿವೆ. ಮಾನವೀಯ ಸಂಬಂಧಗಳು, ನೈತಿಕತೆಯ ನಡತೆ, ಸಹಬಾಳ್ವೆ ನೆನೆಪಿಸುವಲ್ಲಿ ಜನಪದ ಸಾಹಿತ್ಯ ಪ್ರಸ್ತುತವಾಗಿದೆ. ಗ್ರಾಮೀಣ ಜನಜೀವನ ಪ್ರತಿಬಿಂಬಿಸುವ ಜನಪದ ಸಾಹಿತ್ಯದಲ್ಲಿ ಸಮಗ್ರ ಜೀವನಾನುಭವವಿದೆ,ನೈತಿಕ ಜೀವನದ ಪರಿಣಾಮಕಾರಿ ಪಾಠವಿದೆ, ಸುಂದರ ಬದುಕಿನ ಸೂತ್ರಗಳಿವೆ, ಬದುಕಿಗೆ ಗೌರವ ತಂದು ಕೊಡುವ, ನಮ್ಮೆಲ್ಲರ ಬಾಳನ್ನು ಬೆಳಗಿಸುವ ಸದ್ಗುಣಗಳ, ಉನ್ನತ ಆದರ್ಶಗಳ ಜ್ಞಾನದ ರಾಶಿಯೇ ಜನಪದ ಸಾಹಿತ್ಯದಲ್ಲಿ ಅಡಕವಾಗಿದೆ ಎಂದ ಯಾಳಗಿ ಅವರು ಜಾನಪದ ಭೂತಕಾಲದ ಪ್ರತಿಧ್ವನಿಯಾಗಿರುವಂತೆ ವರ್ತಮಾನ ಕಾಲದ ಕಸುವುಳ್ಳ ಧ್ವನಿಯು ಆಗಿದೆ ಎಂದು ಅಭಿಪ್ರಾಯಪಟ್ಟರು.ವಿಶೇಷ ಶಿಬಿರದ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಲ್ಮಠ ಪದವಿ ಕಾಲೇಜಿನ ಪ್ರಾಚಾರ್ಯ ಸಿದ್ದನಗೌಡ ಪಾಟೀಲ ವಹಿಸಿದ್ದರು.ಊರಿನ ಪ್ರಮುಖರಾದ ಕುರುಮಯ್ಯ, ಅಮೀರ್ ಖಾನ್, ರಾಷ್ಟ್ರೀಯ ಸೇವಾ ಯೋಜನಾ ಘಟಕದ ಕಾರ್ಯಕ್ರಮಾಧಿಕಾರಿ ಆನಂದ ಉಪ್ಪಳ, ಉಪನ್ಯಾಸಕ ಸಿದ್ದೇಶ್ ಪೋಲಿಸ್ ಪಾಟೀಲ ಜಾಲವಾಡಗಿ, ಉಪನ್ಯಾಸಕಿ ಲಕ್ಷ್ಮೀ ನಸಲಾಪುರ ಮುಂತಾದವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.ಶಿಬಿರಾರ್ಥಿ ಸಂಗೀತಾ ವರದಿ ವಾಚಿಸಿದರು, ಈರೇಶಮ್ಮ ಸ್ವಾಗತಿಸಿದರು ಅಕ್ಷತಾ ಕಾರ್ಯಕ್ರಮ ನಿರೂಪಿಸಿದರು.

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉಚಿತ ಬೇಸಿಗೆ ಶಿಬಿರ

ನೈಜ್ಯ ದೆಸೆ ನ್ಯೂಸ್



ಮಾರ್ಚ್ 5ರಿಂದ ಅರ್ಜಿ ಸ್ವೀಕಾರ, ಏಪ್ರಿಲ್ 5ರಿಂದ ಆರಂಭ ಮಾನ್ವಿ : ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ತಾಲೂಕ ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ ಉಚಿತ ಬೇಸಿಗೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲೂಕ ಅಧ್ಯಕ್ಷರಾದ ಅರುಣ್ ಕುಮಾರ್ ಚಂದಾ ತಿಳಿಸಿದ್ದಾರೆ.ಅವರಿಂದು ಪಟ್ಟಣದ ಪ್ರವೇಶ ಮಂದಿರದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಾ ಕಳೆದ ಬಾರಿ ವೀರಶೈವ ಲಿಂಗಾಯತ ಸಮಾಜದ ವಿದ್ಯಾರ್ಥಿಗಳಿಗೆ ಮಾತ್ರ ಈ ಶಿಬಿರವನ್ನು ಏರ್ಪಡಿಸಲಾಗಿದ್ದರೆ, ಈ ಬಾರಿ ಎಲ್ಲಾ ಜನಾಂಗದ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದ್ದು, ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದ ತಲಾ 100 ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುವುದು ಎಂದು ಹೇಳಿದರು. ಏಪ್ರಿಲ್ 5ರಿಂದ ಪ್ರಾರಂಭವಾಗುವ ಶಿಬಿರವು ಬೆಳಿಗ್ಗೆ 9.30ರಿಂದ ಸಂಜೆ 4.30ರವರೆಗೆ ಒಟ್ಟು 45 ದಿನಗಳ ಕಾಲ ಪಟ್ಟಣದ ಸಿದ್ದಾರ್ಥ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯಲಿದೆ ಎಂದು ತಿಳಿಸಿದರು.ಈ ಶಿಬಿರಕ್ಕೆ ಮಾರ್ಚ್ 5ರಿಂದ ಅರ್ಜಿಗಳನ್ನು ಸ್ವೀಕ–ರಿಸಲಾಗುತ್ತಿದ್ದು, ಮೊದಲ ಬಂದವರಿಗೆ ಪ್ರಥ–'ಮ ಆದ್ಯತೆ ನೀಡಲಾಗುವುದು. ಮಹಾಲಕ್ಷ್ಮಿ ಸೂಪರ್ ಮಾರ್ಕೆಟ್ ಹತ್ತಿರ ಇರುವ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಕಾರ್ಯಾಲಯ ಹಾಗೂ ಮಲ್ಲಿಕಾರ್ಜುನ ಚಿತ್ರಮಂದಿರ ಪಕ್ಕದಲ್ಲಿರುವ ಹೊಯ್ಸಳ ಇನ್ಫೋಟೆಕ್ ಕೇಂದ್ರಗಳಲ್ಲಿ ಅರ್ಜಿಗಳು ದೊರೆಯಲಿವೆ ಎಂದು ತಿಳಿಸಿದರು. ಕಾರ್ಯಕ್ರಮವನ್ನು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್.ಬೋಸರಾಜ ಅವರು ಉದ್ಘಾಟಿಸಲಿದ್ದು, ವಿವಿಧ ಮಠಾಧೀಶರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ತರಬೇತಿ ಅವಧಿಯಲ್ಲಿ ವಿವಿಧ ಮಠಾಧೀಶರು ಹಾಗೂ ಗಣ್ಯರು ವಿದ್ಯಾರ್ಥಿಗಳಿಗೆ ಅರಿವು ಮತ್ತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ವಿಶೇಷ ಉಪನ್ಯಾಸಗಳನ್ನು ನೀಡಲಿದ್ದಾರೆ. ತಾಲೂಕ ವೀರಶೈವ ಲಿಂಗಾಯತ ಸಮಾಜದ ಪ್ರಧಾನ ಕಾರ್ಯದರ್ಶಿ ಜಗದೀಶ್ ಓತೂರ್ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗವು ವಿದ್ಯಾಭ್ಯಾಸದಲ್ಲಿ ಹಿಂದುಳಿದಿರುವ ಹಿನ್ನೆಲೆ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಉತ್ತೇಜನ ನೀಡುವ ಉದ್ದೇಶದಿಂದ ಈ ಉಚಿತ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಸುಮಾರು 10 ಜನ ನು–ರಿತ ಶಿಕ್ಷಕರಿಂದ ತರಬೇತಿ ನೀಡಲಾಗುತ್ತಿದ್ದು, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸುಸಜ್ಜಿತ ಕೊಠಡಿ, ವಿದ್ಯುತ್ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ತಾಲೂಕ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಹ–ರಿಹರ ಪಾಟೀಲ್, ಕಾರ್ಯಾಧ್ಯಕ್ಷ ಶ್ರೀಧರಸ್ವಾಮಿ ಹಿರೇಕೊಟ್ನೆಕಲ್, ಕಾರ್ಯದರ್ಶಿ ಶಂಕ್ರಪ್ಪ ಅಂಗಡಿ ನಕ್ಕುಂದಿ, ಮುಖಂಡರಾದ ಡಾ.ಮಲ್ಲಿಕಾರ್ಜುನ ಬೊಮ್ಮನಾಳ, ಸಮಿತಿಯ ಸದಸ್ಯರಾದ ವಿಶ್ವನಾಥ್ ಪಾಟೀಲ್, ಚಂದ್ರಶೇಖರ್ ಕುಂಬಾರ, ಹೊಯ್ಸಳ ಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಆಡಳಿತ ಮಂಡಳಿ ರಚನೆ: ಸಭೆ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಸಮೀಪದ ಅಂಬಳನೂರ ಗ್ರಾಮದ ಅಂಜುಮನ್–ಏ–ಇಸ್ಲಾಮಿನ ಹೊಸ ಆಡಳಿತ ಮಂಡಳಿ ರಚಿಸಲು ಮಾರ್ಚ್ 13 ರಂದು ಶುಕ್ರವಾರ ಮಧ್ಯಾಹ್ನ 3:00 ಘಂಟೆಗೆ ಗ್ರಾಮದ ಮಕ್ಕಾ ಮಸೀದಿಯಲ್ಲಿ ಸಭೆ ಕರೆಯಲಾಗಿದೆ. ಅಂಬಳನೂರ ಗ್ರಾಮದ ಸರ್ವ ಮುಸ್ಲಿಂ ಬಾಂಧವರು ಸದರಿ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಅಧ್ಯಕ್ಷ ಲಾಲಸಾಬ ಅಮೀನಸಾಬ ನಾಯ್ಕೋಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಕಲ್ಯಾಣಕ್ಕಾಗಿ ಮಹಾ ರುದ್ರಾಭಿಷೇಕ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್



ತಾಳಿಕೋಟಿ: ತಾಲೂಕಿನ ನಾವದಗಿ ಗ್ರಾಮ ಬ್ರಹನ್ಮಠದ ಷ.ಬ್ರ. ರಾಜಗುರು ರಾಜೇಂದ್ರ ಒಡೆಯರ ಶಿವಾಚಾರ್ಯ ಮಹಾಸ್ವಾಮಿಗಳ ಗುರು ಪಟ್ಟಾಧಿಕಾರದ ದ್ವಿತೀಯ ವಾರ್ಷಿಕೋತ್ಸವದ ಅಂಗವಾಗಿ ನಾಡಿನ ಶಾಂತಿ ಹಾಗೂ ಲೋಕ ಕಲ್ಯಾಣಕ್ಕಾಗಿ ಮಹಾ ರುದ್ರಾಭಿಷೇಕ ಹಾಗೂ ಸಹಸ್ರ ಬಿಲ್ವಾರ್ಚನೆ ಪೂಜಾ ಕೈಂಕರ್ಯ ಸೋಮವಾರ ಜರುಗಿತು. ನಾವದಗಿ ಗ್ರಾಮದ ಮೂಲ ಬ್ರಹನ್ಮಠದಲ್ಲಿರುವ ಲಿಂಗೈಕ್ಯ ಶ್ರೀ ರಾಜ ಗುರು ಪರ್ವತೇಶ್ವರರ ಕರ್ತೃ ಗದ್ದುಗೆ ಶ್ರೀ ಮಠದ ಪೀಠಾಧಿಪತಿಗಳಾದ ಷ.ಬ್ರ. ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಹಾಗೂ ಗ್ರಾಮದ ಸಮಸ್ತ ಭಕ್ತರ ಸಮ್ಮುಖದಲ್ಲಿ ಈ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆದವು. ಈ ಸಂದರ್ಭದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ರಾಜಗುರು ರಾಜೇಂದ್ರ ಒಡೆಯರ ಶಿವಾಚಾರ್ಯರು ಕಳೆದ 20 ದಿನಗಳಿಂದ ಗುರು ಪಟ್ಟಾಧಿಕಾರದ ದ್ವಿತೀಯ ವಾರ್ಷಿಕೋತ್ಸವದ ನಿಮಿತ್ತವಾಗಿ ಶ್ರೀ ಮಠದಲ್ಲಿ ಹಲವಾರು ಕಾರ್ಯಕ್ರಮಗಳು ಜರುಗುತ್ತಿವೆ ಇಂದು ಸಮಾರೋಪವಾಗಿ ಈ ವಿಶೇಷ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಸಜ್ಜಲಗುಡ್ಡ ಹಿರೇಮಠದ ಸಂತೋಷ ಶಾಸ್ತ್ರಿಗಳು ಹಾಗೂ ಮೈಲೇಶ್ವರ ಹಿರೇಮಠದ ವೀರೇಶ ಶಾಸ್ತ್ರಿಗಳು ಪೂಜಾ ವಿಧಿ ವಿಧಾನಗಳನ್ನು ಶಾಸ್ತ್ರೋತ್ತವವಾಗಿ ನೆರವೇರಿಸಿದರು. ಪೂಜಾ ಕಾರ್ಯಕ್ರಮಗಳಲ್ಲಿ ನಾವದಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ನೂರಾರು ಭಕ್ತರು ಭಾಗವಹಿಸಿ ಪುನೀತರಾದರು.

# ಎಕೀನಗೆ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ

ನೈಜ್ಯ ದೆಸೆ ನ್ಯೂಸ್



ತಾಳಿಕೋಟಿ: ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ವತಿಯಿಂದ ಫೆ.28 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ರಾಜ್ಯ ಮಟ್ಟದ ಶೈಕ್ಷಣಿಕ ಮಹಾಸಮ್ಮೇಳನ ಹಾಗೂ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಕೊಣ್ಣೂರ ಉರ್ದು ಕ್ಲಸ್ಟರ್ ಸಿಆರ್‌ಪಿಯಾದ ಮೊಹಮ್ಮದ್ ಜಾವೀದ ಅಬ್ದುಲ್ ರಹಮಾನ ಎಕೀನ(ತಾಳಿಕೋಟಿ) ಇವರಿಗೆ ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ವಿಶಿಷ್ಟ ಸೇವೆಗಾಗಿ "ಮಹಾತ್ಮ ಜ್ಯೋತಿಬಾ ಫುಲೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ" ನೀಡಿ ಗೌರವಿಸಲಾಯಿತು. ಪ್ರಶಸ್ತಿಯನ್ನು ಸ್ವೀಕರಿಸಿ ಮಾತನಾಡಿದ ಜಾವೀದ ಯಕೀನ ಅವರು ಇದನ್ನು ತಮ್ಮ ವೈಯಕ್ತಿಕ ಸಾಧನೆ ಎಂದು ಪರಿಗಣಿಸದೆ ಶಿಕ್ಷಕ ಸಮುದಾಯದ ಸಹಕಾರ ಮತ್ತು ಪ್ರೋತ್ಸಾಹದ ಫಲವೆಂದು ಹೇಳಿದರು. ಸನ್ಮಾನಿತ ಶಿಕ್ಷಕರು ಮುಖ್ಯಮಂತ್ರಿ ಉಪಮುಖ್ಯಮಂತ್ರಿ, ಶಿಕ್ಷಣ ಸಚಿವರು, ರಾಜ್ಯಾಧ್ಯಕ್ಷ ಚಂದ್ರಶೇಖರ್ ನುಗಲಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಚೇತನ್ ಎಚ್‌ಎಸ್, ಜಿಲ್ಲಾಧ್ಯಕ್ಷ ಅರ್ಜುನ್ ಲಮಾಣಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಲ್ಲಾಭಕ್ಷ ವಾಲಿಕಾರ,ಕೊಣದಿ ಸರ್, ತಾಲೂಕ ಅಧ್ಯಕ್ಷರಾದ ಬಿ. ಟಿ.ವಜ್ಜಲ್, ಹಾಗೂ ತಾಲೂಕ ಪ್ರಧಾನ ಕಾರ್ಯದರ್ಶಿ ಎಸ್ ಬಿ ಬೀರಗೊಂಡ, ಪ್ರಾಥಮಿಕ ಶಿಕ್ಷಕರ ಸಂಘದ ಜಿಲ್ಲಾ ಕಾರ್ಯದರ್ಶಿ ಅಂಬಿಕಾ ಗೋಗಿ, ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್. ಸಾವಳಗಿ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸಿದರು. ಈ ಪ್ರಶಸ್ತಿ ಮುಂದಿನ ದಿನಗಳಲ್ಲಿ ನನಗೆ ಇನ್ನಷ್ಟು ನಿಷ್ಠೆ ಪ್ರಾಮಾಣಿಕತೆ ಮತ್ತು ಸಮರ್ಪಣ ಭಾವದಿಂದ ಶಿಕ್ಷಣ ಸೇವೆ ಸಲ್ಲಿಸಲು ಪ್ರೇರಣೆಯಾಗಲಿದೆ ಎಂದು ತಿಳಿಸಿ ಎಲ್ಲರಿಗೂ ಅಭಿನಂದನೆಗಳನ್ನು ಸಲ್ಲಿಸಿದರು.

# ಹೃದಯ ರೋಗ ಹಾಗೂ ಮೂತ್ರಕೋಶದ ಚಿಕಿತ್ಸೆಗೆ ಅಗತ್ಯ ಯಂತ್ರೋಪಕರಣಗಳನ್ನು ಅಳವಡಿಸುವಂತೆ ಕರವೇ ಒತ್ತಾಯ



ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು : ಮಾ 3 ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಜನಸಾಮಾನ್ಯ–ರಿಗೆ ಪ್ರಮುಖ ಆರೋಗ್ಯ ಕೇಂದ್ರವಾಗಿದ್ದು, ಪ್ರತಿದಿನ ನೂರಾರು ಬಡ ಹಾಗೂ ಮಧ್ಯಮ ವರ್ಗದ ರೋಗಿಗಳು ಚಿಕಿತ್ಸೆಗೆ ಆಗಮಿಸುತ್ತಿದ್ದಾರೆ. ಆದರೆ ಹೃದಯ ರೋಗ (Cardiac) ಹಾಗೂ ಮೂತ್ರಕೋಶ (Urology) ಸಂಬಂಧಿತ ಗಂಭೀರ ಕಾಯಿಲೆಗಳಿಗೆ ಅಗತ್ಯವಾದ ಆಧುನಿಕ ಯಂತ್ರೋಪಕರಣಗಳ ಕೊರತೆ ಇದೆ . ಹೃದಯ ರೋಗ ಹಾಗೂ ಮೂತ್ರಕೋಶದ ಚಿಕಿತ್ಸೆಗೆ ಅಗತ್ಯ ಯಂತ್ರೋಪಕರಣಗಳನ್ನು ಅಳವಡಿಸುವಂತೆ ಕರವೇ ಪ್ರವೀಣ್ ಶೆಟ್ಟಿ ಬಣದ ತಾಲೂಕ ಅಧ್ಯಕ್ಷ ಆಂಜನೇಯ ಭಂಡಾರಿ ತಾಲೂಕು ಆರೋಗ್ಯಾಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿ ನಂತರ ಮಾತನಾಡಿದ ಅವರು ಹೃದಯ ಸಂಬಂಧಿತ ತುರ್ತು ಪರಿಸ್ಥಿತಿಗಳಾದ ಹೃದಯಾಘಾತ, ರಕ್ತದ ಒತ್ತಡ ಸಮಸ್ಯೆ, ಹೃದಯ ಬಡಿತದ ವ್ಯತ್ಯಾಸ ಇತ್ಯಾದಿಗಳಿಗೆ ತಕ್ಷಣ ಚಿಕಿತ್ಸೆ ನೀಡುವ ಪರೀಕ್ಷೆ ಮತ್ತು ಯಂತ್ರ, ಟ್ರೆಡ್‌ಮಿಲ್ ಟೆಸ್ಟ್ (TMT), ಇಕೋ ಕಾರ್ಡಿಯೋಗ್ರಫಿ (ECHO) ಯಂತ್ರ, ಡಿಫಿಬ್ರಿಲೇಟರ್ ಮುಂತಾದ ಉಪಕರಣಗಳು ಅಗತ್ಯವಿರುತ್ತವೆ. ಇವುಗಳ ಕೊರತೆಯಿಂದ ರೋಗಿಗಳನ್ನು ದೂರದ ಜಿಲ್ಲಾ ಅಥವಾ ಖಾಸಗಿ ಆಸ್ಪತ್ರೆಗಳಿಗೆ ಕಳುಹಿಸುವ ಅನಿವಾರ್ಯತೆ ಉಂಟಾಗುತ್ತಿದೆ. ಮೂತ್ರಕೋಶ ಸಂಬಂಧಿತ ಸಮಸ್ಯೆಗಳಾದ ಕಿಡ್ನಿ ಕಲ್ಲು, ಮೂತ್ರನಾಳದ ತೊಂದರೆ, ರೋಗಿಗಳಿಗೆ ಸಕಾಲದಲ್ಲಿ ಚಿಕಿತ್ಸೆ ನೀಡಲು ಎಂಡೋಸ್ಕೋಪಿಕ್ ಉಪಕರಣಗಳು ಮುಂತಾದವುಗಳು ಅತ್ಯವಶ್ಯಕವಾಗಿವೆ. ಅಲ್ಲದೇ ತಜ್ಞ ವೈದ್ಯರು ಇದ್ದರು ಸಹ ಸರಿಯಾದ ಯಂತ್ರೋಪಕರಣಗಳು ಇಲ್ಲದ ಕಾರಣ ಬಡ ರೋಗಿಗಳು ಹೆಚ್ಚಿನ ವೆಚ್ಚವನ್ನು ಭರಿಸಬೇಕಾಗುತ್ತಿದೆ.

ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಬಡಜನರ ಆರೋಗ್ಯದ ರಕ್ಷಣೆಗೆ ತಕ್ಷಣವೇ ಹೃದಯ ಮತ್ತು ಮೂತ್ರಕೋಶ ಚಿಕಿತ್ಸೆಗೆ ಅಗತ್ಯವಾದ ಎಲ್ಲಾ ಆಧುನಿಕ ಯಂತ್ರೋಪಕರಣಗಳನ್ನು ಸಾರ್ವಜನಿಕ ಆಸ್ಪತ್ರೆಯಲ್ಲಿ ಅಳವಡಿಸಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ತಮ್ಮ ಕಾರ್ಯಾಲಯದ ಮುಂದೆ ಪ್ರತಿಭಟನೆಯನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಹೇಳಿದರು . ಈ ಸಂದರ್ಭದಲ್ಲಿ ಶಿವು ಪತ್ತಾರ್ , ವೆಂಕಟೇಶ್ ಉಪ್ಪಾರ್ , ಅಶೋಕ್ ನಾಯಕ್ , ಸಲೀಮ್ ಖಾನ್ ,ಅಭಿ ನಾಯಕ್ , ಶಾರು ಜೋಗೇಶ್ , ಯಲ್ಲಪ್ಪ ದೊಡ್ಡಮನಿ ಸೇರಿದಂತೆ ಇದ್ದರು .

## ನೇಮಕಾತಿ ಪ್ರಕಟಣೆ

DHFWS ರಾಯಚೂರು ನೇಮಕಾತಿ 2026 – 20 ಜೂನಿಯರ್ ಮಹಿಳಾ ಆರೋಗ್ಯ ಸಹಾಯಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ DHFWS ರಾಯಚೂರು ನೇಮಕಾತಿ 2026: 20 ಜೂನಿಯರ್ ಮಹಿಳಾ ಆರೋಗ್ಯ ಸಹಾಯಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ರಾಯಚೂರು ಫೆಬ್ರವರಿ 2026 ರ DHFWS ರಾಯಚೂರು ಅಧಿಕೃತ ಅಧಿಸೂಚನೆಯ ಮೂಲಕ ಜೂನಿಯರ್ ಮಹಿಳಾ ಆರೋಗ್ಯ ಸಹಾಯಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ರಾಯಚೂರು – ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಮಾರ್ಚ್ 11, 2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 25–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 11–ಮಾರ್ಚ್–2026 ಅಧಿಕೃತ

## ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮ – ಡಾ.ಹಂಪಣ್ಣ ಸಜ್ಜನ್ ರಾಯಚೂರು: ಇಂದಿನ ಯುವ ಪೀಳಿಗೆಗೆ ಸಾಮಾಜಿಕ ಮೌಲ್ಯ, ನೀತಿ,



❑ ನೈಜ್ಯ ದೆಸೆ ನ್ಯೂಸ್

ಉತ್ತಮ ಸಂಸ್ಕಾರ ನೀಡಿ ಒಳ್ಳೆಯ ನಾಗರಿಕರನ್ನಾಗಿ ರೂಪಿಸಬೇಕಿದೆ. ಮಹನೀಯರ ಜಯಂತಿಗಳ ಆಚರಣೆಯ ಉದ್ದೇಶವೂ ಇದೇ ಆಗಿದೆ' ಎಂದು ರಾಯಚೂರು ಉಪವಿಭಾಗಾಧಿಕಾರಿ ಡಾ.ಹಂಪಣ್ಣ ಸಜ್ಜನ್ ಅಭಿಪ್ರಾಯಪಟ್ಟರು.ಇಲ್ಲಿನ ವೀರಶೈವ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಭಾನುವಾರ ಆಯೋಜಿಸಲಾಗಿದ್ದ ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.ಶರಣರು, ದಾರ್ಶನಿಕರು, ಸೂಫಿ–ಸಂತರು ಸಮಾಜದಲ್ಲಿರುವ ಅಂಕು–ಡೊಂಕು ತಿದ್ದಲು ನೀಡಿದ ಸಂದೇಶಗಳು, ವಿಚಾರಧಾರೆಗಳು ಇಂದಿಗೂ ಪ್ರಸ್ತುತವಾಗಿವೆ. ಈ ದಿಸೆಯಲ್ಲಿ ರೇಣುಕಾಚಾರ್ಯರೂ ಪ್ರಮುಖರಾಗಿದ್ದು, ಅವರ ಆದರ್ಶಗಳನ್ನು ನಾವು ಅರ್ಥೈಸಿಕೊಂಡು ಮೈಗೂಡಿಸಿಕೊಳ್ಳಬೇಕು' ಎಂದು ಹೇಳಿದರು.ಕಲಬುರಗಿ ಜಿಲ್ಲೆಯ ಕಾಳಗಿ ತಾಲ್ಲೂಕಿನ ಬಣಮಗಿಯ ರಾಚೋಟೇಶ್ವರ ಶಿವಾಚಾರ್ಯರು ಮಾತನಾಡಿ,' ಎಲ್ಲ ಧರ್ಮಗಳಿಗೆ ಆಶ್ರಯ ನೀಡಿದ ಧರ್ಮ ವೀರಶೈವ ಧರ್ಮವಾಗಿದೆ. ಮಕ್ಕಳಿಗೆ ಸಂಸ್ಕಾರ, ಲಿಂಗ ಪೂಜೆ ಕಲಿಸಬೇಕು. ಎಲ್ಲ ಧರ್ಮಗಳಿಂತ ವೀರಶೈವ ಧರ್ಮ ದೊಡ್ಡದಾಗಿದೆ. ಪಂಚ ಪೀಠಗಳನ್ನು ಸ್ಥಾಪಿಸಿ ಪಂಚ ಪೀಠಾಧಿಕಾರಿಗಳನ್ನು ನೇಮಿಸಿದರು. ರೇಣುಕಾಚಾರ್ಯರು ಕೇವಲ ಒಂದು ಸಮಾಜದವರನ್ನು ಪ್ರೀತಿಯಿಂದ ಕಾಣದೆ ಎಲ್ಲ ಸಮಾಜದವರನ್ನು ಪ್ರೀತಿ ವಿಶ್ವಾಸದಿಂದ ನೋಡಿದ್ದಾರೆ' ಎಂದರು.ಮೆರವಣಿಗೆಗೆ ಚಾಲನೆ: ಇದಕ್ಕೂ ಮುಂಚೆ, ನಗರದ ಹೈದರಾಬಾದ್ ಬೈಪಾಸ್ ರಸ್ತೆ ಬಳಿರುವ ರೇಣುಕಾಚಾರ್ಯ ವೃತ್ತದಲ್ಲಿ ರೇಣುಕಾಚಾರ್ಯರ ಭಾವಚಿತ್ರ ಮೆರವಣಿಗೆಗೆ ಶಾಸಕ ಡಾ.ಶಿವರಾಜ ಎಸ್.ಪಾಟೀಲ ಅವರು ಚಾಲನೆ ನೀಡಿದರು.ಶಾಂತಮಲ್ಲ ಶಿವಾಚಾರ್ಯರು, ಅಭಿನವ ರಾಚೋಟಿವೀರ ಶಿವಾಚಾರ್ಯರು, ವೀರ ಸಂಗಮೇಶ್ವರ ಶಿವಾಚಾರ್ಯರು ಮಾತನಾಡಿದರು.ಪಾಲಿಕೆಯ ಉಪ ಆಯುಕ್ತೆ ಸಂತೋಷ ರಾಣಿ, ವಲಯ ಆಯುಕ್ತ ಮಲ್ಲಿಕಾರ್ಜುನ, ಸಮಾಜದ ಜಿಲ್ಲಾಧ್ಯಕ್ಷ ಶರಣು ಭೂಪಾಲ್ ನಾಡಗೌಡ, ಸಮಾಜದ ಮುಖಂಡರಾದ ವೀರಯ್ಯ ಸ್ವಾಮಿ, ಮಂಜುನಾಥ ಸೇರಿದಂತೆ ಇತರರು ಹಾಜರಿದ್ದರು.


## ದ್ವಿತೀಯ ಪಿಯುಸಿ ಪರೀಕ್ಷೆ; 50 ವಿದ್ಯಾರ್ಥಿಗಳು ಗೈರು ಹಾಜರಿ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು ಮಾರ್ಚ್ 02 (ಕರ್ನಾಟಕ ವಾರ್ತೆ): ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2026ರ ಮಾರ್ಚ್ 02ರ ಸೋಮವಾರ ದಂದು ನಡೆದ ದ್ವಿತೀಯ ಪಿಯುಸಿ–01ರ ಭೂಗೋಳ ಶಾಸ್ತ್ರ ಹಾಗೂ ಸಂಖ್ಯಾಶಾಸ್ತ್ರ ವಿಷಯದ ಪರೀಕ್ಷೆಯಲ್ಲಿ ಒಟ್ಟು 50 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ಭೂಗೋಳ ಶಾಸ್ತ್ರ ವಿಷಯದಲ್ಲಿ ಒಟ್ಟು 586 ನೋಂದಣೆಯಾಗಿದ್ದು, 557 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 29 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.ಸಂಖ್ಯಾಶಾಸ್ತ್ರ ವಿಷಯದಲ್ಲಿ ಒಟ್ಟು 700 ನೋಂದಣೆಯಾಗಿದ್ದು, 679 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 21 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಪಿಎಫ್ ಕಚೇರಿಯಿಂದ ಆರ್‌ಆರ್‌ಸಿ ಮೊತ್ತ ಪಾವತಿಸಲು ಸೂಚನೆ

❑ ನೈಜ್ಯ ದೆಸೆ ನ್ಯೂಸ್




ರಾಯಚೂರು ಮಾರ್ಚ್ 02 (ಕರ್ನಾಟಕ ವಾರ್ತೆ): ಉದ್ಯೋಗಿಗಳ ಭವಿಷ್ಯ ನಿಧಿ ಮತ್ತು ಇತರ ನಿಯಮಾವಳಿ ಕಾಯ್ದೆ, 1952 (ಇಪಿಎಫ್ & ಎಮ್‌ಪಿ ಆಯಕ್ಟ್ 1952) ರ ಸೆಕ್ಷನ್ 8 ಅಡಿಯಲ್ಲಿ ಜಾರಿ ಮಾಡಲಾದ ವಸೂಲಿ ಪ್ರಮಾಣ ಪತ್ರಗಳು (ಆರ್‌ಆರ್‌ಸಿ–ಎಸ್) ವಿರುದ್ಧವಾಗಿ ಹೊರಡಿಸಲಾದ ಎಲ್ಲಾ ಸಂಸ್ಥೆಗಳು / ಉದ್ಯೋಗದಾತರಿಗೆ ತಿಳಿಸಲಾಗಿದೆ. ಆ ಪ್ರಮಾಣ ಪತ್ರಗಳಲ್ಲಿ ನಿರ್ದಿಷ್ಟಪಡಿಸಿದ ಬಾಕಿ ಮೊತ್ತವನ್ನು ವಸೂಲಿ ಪ್ರಕ್ರಿಯೆಗಳಿಗೆ ಅನುಗುಣವಾಗಿ ಅಳವಡಿಸಲಾದ ದ್ವಿತೀಯ ಮತ್ತು ತೃತೀಯ ಅನುಸೂಚಿಗಳ ಅನ್ವಯ ವಸೂಲಿ ಮಾಡಲಾಗುತ್ತದೆ.ಎಲ್ಲಾ ಸಂಸ್ಥೆಗಳು ತಕ್ಷಣವೇ ಆರ್‌ಆರ್‌ಸಿ ಮೊತ್ತವನ್ನು ಸಂಪೂರ್ಣವಾಗಿ ಪಾವತಿಸಲು ಸೂಚನೆ ನೀಡಲಾಗಿದೆ. ಈ ಪ್ರಕಟಣೆ, ಯಾವುದೇ ನ್ಯಾಯಾಲಯ ಅಥವಾ ನ್ಯಾಯಮಂಡಳಿ ವಸೂಲಿ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ನಿಲ್ಲಿಸಿರುವ ಮತ್ತು ಆ ತಾತ್ಕಾಲಿಕ ನಿಲುಗಡೆ ಪ್ರಸ್ತುತ ಜಾರಿಯಲ್ಲಿರುವ ಪ್ರಕರಣಗಳಿಗೆ ಅನ್ವಯಿಸುವುದಿಲ್ಲ ಎಂದು ವಸೂಲಿ ಅಧಿಕಾರಿ ಮತ್ತು ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರಾದ ನೀರಜ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ನಿಗಮದ ಎಲ್ಲಾ ಯೋಜನೆಗಳು ಫಲಾನುಭವಿಗಳಿಗೆ ಶೀಘ್ರ ತಲುಪಲಿ



❑ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು ಮಾ 03 : ಡಿ. ದೇವರಾಜ ಅರಸು ನಿಗಮ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮ ಹಾಗೂ ಕಟ್ಟಡ ಕಾರ್ಮಿಕ ಇಲಾಖೆ ಮೂಲಕ ಜಾರಿಯಲ್ಲಿರುವ ವಿವಿಧ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮಯಕ್ಕೆ ಸರಿಯಾಗಿ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ವಜ್ಜಲ್ ಅಧಿಕಾರಿಗಳಿಗೆ ಸೂಚಿಸಿದರು. ತಾಲೂಕು ಪಂಚಾಯತ್ ವತಿಯಿಂದ 22 ಮಹಿಳೆಯರಿಗೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಿ. ದೇವರಾಜ ಅರಸು ನಿಗಮದ ಉಚಿತ ಹೊಲಿಗೆ ಯಂತ್ರಗಳನ್ನು ವಿತರಿಸಲಾಯಿತು. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಗಂಗಾ ಕಲ್ಯಾಣ ಯೋಜನೆಯಡಿ 2018–19ರಿಂದ 2022–23 ಆಯ್ಕೆಯಾದ ಒಟ್ಟು 26 ಫಲಾನುಭವಿಗಳಿಗೆ ಆದೇಶ ಪತ್ರಗಳನ್ನು ನೀಡಲಾಯಿತು. ಅಲ್ಲದೆ, ಕಾರ್ಮಿಕ ಇಲಾಖೆಯಿಂದ ಆಯ್ಕೆಯಾದ 300 ಕಟ್ಟಡ ಕಾರ್ಮಿಕರಿಗೆ ಸುರಕ್ಷತಾ ಕಿಟ್‌ಗಳನ್ನು ವಿತರಿಸಿ ಮಾತನಾಡಿದ ಶಾಸಕ ಮಾನಪ್ಪ ಡಿ ವಜ್ಜಲ್ ಸರ್ಕಾರದ ಕೆಲವು ಯೋಜನೆಗಳಲ್ಲಿ ಫಲಾನುಭವಿಗಳನ್ನು ಗುರುತಿಸುವ ಮತ್ತು ಸೌಲಭ್ಯಗಳನ್ನು ನೀಡುವ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿರುವುದು ಗಮನಕ್ಕೆ ಬರುತ್ತಿದೆ. ಅಧಿಕಾರಿಗಳು ಇಂತಹ ವಿಳಂಬ ನೀತಿಯನ್ನು ತಿದ್ದಿಕೊಂಡು, ಯೋಜನೆಗಳ ಅನುಷ್ಠಾನವನ್ನು ವೇಗಗೊಳಿಸಬೇಕು ಎಂದು ಸೂಚಿಸಿದರು. ಯೋಜನೆಗಳ ಸದುಪಯೋಗ ಪಡೆದು ರೈತರು, ನಿರ್ಗತಿಕರು ಹಾಗೂ ಮಹಿಳೆಯರು ಸ್ವಾವಲಂಬಿ ಬದುಕು ರೂಪಿಸಿಕೊಳ್ಳಬೇಕು ವಿಶೇಷವಾಗಿ ಗಂಗಾ ಕಲ್ಯಾಣ ಯೋಜನೆಯಡಿ ಸಣ್ಣ ಮತ್ತು ಅತಿ ಸಣ್ಣ ರೈತರು ತಮ್ಮ ಜಮೀನಿನಲ್ಲಿ ಬೋರ್ ವೆಲ್ ಕೊರೆಸಿ ನೀರಾವರಿ ಸೌಲಭ್ಯ ಪಡೆದು ಆರ್ಥಿಕವಾಗಿ ಸದೃಢರಾಗಬೇಕು ಎಂದು ಕಿವಿಮಾತು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಆದೇಶ, ಜಿಲ್ಲಾ ದೇವರಾಜ ಅರಸು ಜಿಲ್ಲಾ ವ್ಯವಸ್ಥಾಪಕ ಮಂಜುನಾಥ್, ಕಾಂತಣ್ಣ, ಕಟ್ಟಡ ಕಾರ್ಮಿಕ ಇಲಾಖೆ ಅಧಿಕಾರಿ ಶಾಂತಕುಮಾರ್ ಮೌನೇಶ ಹಲಕಾವಟಗಿ, ಗಿರಿ ಮಲ್ಲನಗೌಡ ಕರಡಕಲ್, ವೆಂಕನಗೌಡ ಪಾಟೀಲ್, ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ ಪಂಪನಗೌಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

## ನಂದವಾಡಗಿ ಹರಿ ನೀರಾವರಿಗೆ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್



ಲಿಂಗಸಗೂರು : ಮಾ 3 ಕೃಷ್ಣಾ ಮೇಲ್ದಂಡೆ ಯೋಜನೆಯ ನಂದವಾಡಗಿ ಏತ ನೀರಾವರಿ ಯೋಜನೆಯಿಂದ ಹನಿ ನೀರಾವರಿ ಬದಲು ಹರಿ ನೀರಾವರಿ ಯೋಜನೆಯನ್ನಾಗಿ ಮಾರ್ಪಡಿಸಬೇಕೆಂದು ಒತ್ತಾಯಿಸಿ ನಂದವಾಡಗಿ ಏತ ನೀರಾವರಿ ಹೋರಾಟ ಸಮಿತಿಯ ಸದಸ್ಯರು ಕೆಬಿಜೆಎನ್‌ಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಮನವಿ ಸಲ್ಲಿಸಿದರು.ನಂದವಾಡಗಿ ಏತನೀರಾವರಿ ಕಾಮಗಾರಿಗೆ 2,100 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಟೆಂಡರ್ ಕರೆದು 2020–21 ರ ವೇಳೆಗೆ ಮುಗಿಯಬೇಕಿದ್ದ ಕಾಮಗಾರಿ ಇನ್ನೂ ಮುಗಿದಿಲ್ಲ. ಆದರೂ ಗುತ್ತಿಗೆದಾರರಿಗೆ ಶೇ.90 ಹಣ ಪಾವತಿಸಲಾಗಿದೆ ಎಂದು ಆರೋಪಿಸಿದರು. ಈ ಸಂದರ್ಭದಲ್ಲಿ ಸಮಿತಿ ಅಧ್ಯಕ್ಷ ಸಿದ್ರಾಮಪ್ಪ ಸಾಹುಕಾರ, ಬಸವಂತರಾಯ ಕುರಿ, ಎಚ್.ಬಿ ಮುರಾರಿ, ಶರಣಗೌಡ ಬಸಾಪೂರ, ಬಸವರಾಜ ಅಂಗಡಿ, ರಮೇಶ ಶಾಸ್ತ್ರಿ ಸೇರಿದಂತೆ ಇತರರು ಇದ್ದರು.

## ಪೊಲೀಸ್ ಮ್ಯಾರಾಥಾನ್:ನಮ್ಮ ಪೊಲೀಸ್ ನಮ್ಮ ಹೆಮ್ಮೆ,

❑ ನೈಜ್ಯ ದೆಸೆ ನ್ಯೂಸ್



ಕೊಪ್ಪಳ : ವಾರಾಂತ್ಯದ ರಜೆಯ ದಿನವಾದ ಭಾನುವಾರ ನಗರದಲ್ಲಿ ಬೆಳ್ಳಂಬೆಳಿಗ್ಗೆ ಓಟದ ಖುಷಿ ಮನೆ ಮಾಡಿತ್ತು. ಜಿಲ್ಲಾ ಪೊಲೀಸ್ ವತಿಯಿಂದ ಆಯೋಜಿಸಲಾಗಿದ್ದ ಓಟದ ಸ್ಪರ್ಧೆಯಲ್ಲಿ ನೂರಾರು ಜನ ಪಾಲ್ಗೊಂಡು ಸಂಭ್ರಮ ಅನುಭವಿಸಿದರು. ನಮ್ಮ ಪೊಲೀಸ್ ನಮ್ಮ ಹೆಮ್ಮೆ, ಎಲ್ಲರಿಗೂ ಫಿಟ್‌ನೆಸ್ ಹಾಗೂ ನಶೆಮುಕ್ತ ಕರ್ನಾಟಕದ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಹಮ್ಮಿಕೊಂಡಿದ್ದ ಓಟದ ಸ್ಪರ್ಧೆಯಲ್ಲಿ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಹಾಸ್ಟೆಲ್ ಮಕ್ಕಳು, ಐಆರ್‌ಬಿ ತಂಡದವರು, ಮಹಿಳೆಯರು, ಮಕ್ಕಳು ಹಾಗೂ ಸಾರ್ವಜನಿಕರು ಹೀಗೆ ಅನೇಕರು ಭಾಗವಹಿಸಿದ್ದರು.ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾದ ಓಟ ಗವಿಮಠ ತನಕ ನಡೆಯಿತು.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ ಮಾತನಾಡಿ 'ಜನರೊಂದಿಗೆ ನಾವಿದ್ದೇವೆ ಎನ್ನುವ ಸಂದೇಶ ನೀಡುವ ಸಲುವಾಗಿ ಓಟ ಹಮ್ಮಿಕೊಂಡಿದ್ದೇವೆ. ಇದು ವಾರ್ಷಿಕ ಕ್ರೀಡಾಕೂಟದ ಭಾಗವೇ ಆಗಿದೆ' ಎಂದರು. ಹೆಚ್ಚುವರಿ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ ಎಸ್. ದರಗದ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ವಕೀಲರ ಸಂಘದ ಜಿಲ್ಲಾಧ್ಯಕ್ಷ ಎ.ವಿ.ಕಣವಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ಜಾಲಹಳ್ಳಿಯಲ್ಲಿ ಹೋಳಿ ಹಾಗೂ ರಂಜಾನ್ ಹಬ್ಬದ ಶಾಂತಿ ಸಭೆ

❑ ನೈಜ್ಯ ದೆಸೆ ನ್ಯೂಸ್



ದೇವದುರ್ಗ : ಮಾ 02 ತಾಲೂಕಿನ ಜಾಲಹಳ್ಳಿ ಪೊಲೀಸ್ ಠಾಣೆಯಲ್ಲಿ ಹೋಳಿ ಹಾಗೂ ರಂಜಾನ್ ಹಬ್ಬದ ಅಂಗವಾಗಿ ಶಾಂತಿ ಸಭೆ ನಡೆಯಿತು. ಸಭೆಗೆ ಜಾಲಹಳ್ಳಿ ಪೊಲೀಸ್ ಠಾಣೆಯ ಪಿಎಸ್‌ಐ ವೈಶಾಲಿ ಜಳಕಿ ಅಧ್ಯಕ್ಷತೆ ವಹಿಸಿದ್ದರು.ಸಭೆಯಲ್ಲಿ ಊರಿನ ಹಿರಿಯ ಮುಖಂಡರಾದ ವೀರಣ್ಣ ಬಳೆ ಸಾಹುಕಾರ ಮಾತನಾಡಿ, ಜಾಲಹಳ್ಳಿ ಹಾಗೂ ದೇವದುರ್ಗ ತಾಲೂಕಿನಲ್ಲಿ ಹೋಳಿ ಹಬ್ಬದಂದು ಬಣ್ಣ ಆಡುವ ಪದ್ಧತಿ ಇಲ್ಲ. ಯುಗಾದಿ ಹಬ್ಬದಂದು ಮಾತ್ರ ಬಣ್ಣ ಹಾಕುವ ಸಂಪ್ರದಾಯವಿದೆ ಎಂದು ತಿಳಿಸಿದರು. ರಂಜಾನ್ ಹಬ್ಬವನ್ನು ಜಾಲಹಳ್ಳಿಯಲ್ಲಿ ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಿಸಲಾಗುತ್ತದೆ. ಮುಸ್ಲಿಂ ಬಾಂಧವರು ಈ ಸಂದರ್ಭದಲ್ಲಿ ಬಡವರಿಗೆ ದಾನಧರ್ಮಗಳನ್ನು ನಿರಾಡಂಬರವಾಗಿ ಮಾಡುತ್ತಾ ಬಂದಿದ್ದಾರೆ ಎಂದು ಹೇಳಿದರು.ನಮ್ಮ ಊರಲ್ಲಿ ಯಾವುದೇ ಭೇದಭಾವವಿಲ್ಲದೆ ಎಲ್ಲಾ ಸಮಾಜದವರು ಒಂದಾಗಿ ಎಲ್ಲಾ ಹಬ್ಬಗಳನ್ನು ಆಚರಿಸುವ ಸಂಪ್ರದಾಯವಿದೆ. ಹಬ್ಬದ ದಿನಗಳಲ್ಲಿ ಹಿಂದೂ–ಮುಸ್ಲಿಂ ಬಾಂಧವರು ಪರಸ್ಪರ ಮನೆಗಳಿಗೆ ತೆರಳಿ ಊಟ ಮಾಡುವ ಸಂಪ್ರದಾಯ ಸಾಮಾನ್ಯವಾಗಿದೆ. ಆದ್ದರಿಂದ ನಮ್ಮ ಊರಲ್ಲಿ ಶಾಂತಿ ಸಭೆ ಮಾಡುವ ಅವಶ್ಯಕತೆಯೇ ಇಲ್ಲ, ಏಕೆಂದರೆ ನಾವು ಎಲ್ಲರೂ ಒಗ್ಗಟ್ಟಾಗಿದ್ದೇವೆ ಎಂದು ಹೇಳಿದರು.ಸಾಬಣ್ಣ ಕಮಲದಿನ್ನಿ ಮಾತನಾಡಿ, ಜಾಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇದುವರೆಗೆ ಯಾವುದೇ ಅಹಿತಕರ ಘಟನೆಗಳು ನಡೆದಿಲ್ಲ. ಇಲ್ಲಿ ಎಲ್ಲಾ ಜಾತಿ–ಧರ್ಮದವರು ಒಂದಾಗಿ ಬಾಳುತ್ತಿದ್ದು, ಹಿಂದೂ–ಮುಸ್ಲಿಂ ಎಂಬ ಭೇದಭಾವ ಇಲ್ಲ ಎಂದು ಹೇಳಿದರು.ಬಾಳಪ್ಪ (ಡಿಎಸ್‌ಎಸ್ ಮುಖಂಡರು) ಮಾತನಾಡಿ, ಜಾಲಹಳ್ಳಿ ವ್ಯಾಪ್ತಿಯಲ್ಲಿ ಎಲ್ಲಾ ಜಾತಿಯವರು ಒಟ್ಟಾಗಿ ಎಲ್ಲಾ ಹಬ್ಬಗಳನ್ನು ಆಚರಿಸುತ್ತೇವೆ ಎಂದರು.ಬಾಬಾ ಮೆಡಿಕಲ್ ಹಾಗೂ ರೈತ ಸೇನೆಯ ಮುಖಂಡರಾದ ಮಹಾದೇವಪ್ಪ ಯಾದವ್ ಕೂಡ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.ಸಭೆಯ ಅಧ್ಯಕ್ಷತೆ ವಹಿಸಿದ್ದ ಪಿಎಸ್‌ಐ ವೈಶಾಲಿ ಜಳಕಿ ಮಾತನಾಡಿ, ಜಾಲಹಳ್ಳಿ ವ್ಯಾಪ್ತಿಯ ಹಿರಿಯರು ತಮ್ಮ ತಮ್ಮ ಊರಿನ ಯುವಕರು ಸಾಮಾಜಿಕ ಜಾಲತಾಣಗಳನ್ನು ಜವಾಬ್ದಾರಿಯಿಂದ ಬಳಸುವಂತೆ ಗಮನ ವಹಿಸಬೇಕು ಎಂದು ಸಲಹೆ ನೀಡಿದರು. ಹೋಳಿ ಹಾಗೂ ರಂಜಾನ್ ಹಬ್ಬಗಳನ್ನು ಶಾಂತಿಯುತವಾಗಿ ಆಚರಿಸಲು ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸದಸ್ಯರಾದ ತಿಮ್ಮಣ್ಣ ದಿವಾನ್, ಮಕತುಂ ಪರಾಶಿ, ಸಲಬಣ್ಣ ಹಂಪರಗುಂದಿ ಹಾಗೂ ರಮೇಶ್ ತೆಗ್ಗಳ್ಳಿ ಉಪಸ್ಥಿತರಿದ್ದರು.ಹಿರಿಯ ಮುಖಂಡರಾದ ವೀರಣ್ಣ ಬಳೆ ಸಾಹುಕಾರ, ವೆಂಕೋಬ ಪೂಜಾರಿ, ಚನ್ನಮ್ಮಕ ತಾತನವರು, ವೆಂಕೋಬ ತೋಟ, ಶಂಕರಗೌಡ ಮಾಲಿ ಪಾಟೀಲ್, ಸಾಬಣ್ಣ ಕಮಲದಿನ್ನಿ, ರಂಗಣ್ಣ ಕೋಲ್ಹಾರ್, ಮುದರಂಗಪ್ಪ ವಠಾರ , ಶರಣಗೌಡ ಕಂಬಲದಿನ್ನಿ, ಬಾಳಪ್ಪ ಡಿಎಸ್‌ಎಸ್, ಜಾಕಿರ್ ಹುಸೇನ್ ಆರ್ತಿ, ಕುರಿಸಿದ ಪಟೇಲ್, ಚನ್ನಪ್ಪ ಭವಾನಿ, ಮಾಲಿಂಗ ದೊಡ್ಮನೆ, ಸುರೇಶ್ ಪೂಜಾರಿ, ರಂಗಪ್ಪ ಬಂಡಿ, ಅಮೀರ್ ಪಟೇಲ್, ಇಮ್ರಾನ್ ಖಾನ್, ಬಾಬು ರೈತ ಸಂಘದ ಮುಖಂಡರಾದ ಮಲ್ಲಿಕಾರ್ಜುನ್ ಪಾಟೀಲ್, ಮಹಾದೇವಪ್ಪ ಯಾದವ್, ರಂಗಪ್ಪದೊರೆ, ಮಕತುಂ, ಜಹೀರ್ ಮುರ್ಶೆದ್ ಸೇರಿದಂತೆ ಜಾಲಹಳ್ಳಿ ಹಾಗೂ ಸುತ್ತಮುತ್ತಲಿನ ಸಾರ್ವಜನಿಕರು ಭಾಗವಹಿಸಿದ್ದರು.



## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಸಿನಿಮಾಟೋಗ್ರಫಿ (Cinematography)

ಸಿನಿಮಾಟೋಗ್ರಫಿ (ಛಾಯಾಗ್ರಹಣ ನಿರ್ದೇಶನ) ಕೋರ್ಸ್‌ಗಳು ಕ್ಯಾಮೆರಾ ತಂತ್ರಗಳು,ಲೈಟಿಂಗ್, ದೃಶ್ಯ ಸಂಯೋಜನೆ ಮತ್ತು ಕಥೆ ಹೇಳುವ ಕಲೆಗಳನ್ನು ಕಲಿಸುತ್ತವೆ.ಛಾಯಾಗ್ರಹಣ ಕೋರ್ಸ್‌ನಲ್ಲಿ ಡಿಪ್ಲೊಮಾ ಮತ್ತು ಛಾಯಾಗ್ರಹಣ ಮತ್ತು ವೀಡಿಯೊಗ್ರಫಿ ಕೋರ್ಸ್. ಸೃಜನಶೀಲ ಚಲನಚಿತ್ರ ನಿರ್ಮಾಪಕರು, ಛಾಯಾಗ್ರಹಣ ನಿರ್ದೇಶಕರು (DOP ಗಳು), ಕ್ಯಾಮೆರಾ ಆಪರೇಟರ್‌ಗಳು ಅಥವಾ ದೃಶ್ಯ ಕಥೆಗಾರರಾಗಲು ಬಯಸುವ ವಿದ್ಯಾರ್ಥಿಗಳಿಗಾಗಿ ವಿನ್ಯಾಸಗೊಳಿಸಲಾದ ಸಮಗ್ರ ವೃತ್ತಿಪರ ಕಾರ್ಯಕ್ರಮವಾಗಿದೆ.ಈ ಒಂದು ವರ್ಷದ ಡಿಪ್ಲೊಮಾ ಕಾರ್ಯಕ್ರಮವು ಚಲನಚಿತ್ರ ನಿರ್ಮಾಣದ ಸಂಪೂರ್ಣ ಪ್ರಕ್ರಿಯೆಯನ್ನು ಪರಿಶೋಧಿಸುತ್ತದೆ – ಕ್ಯಾಮೆರಾ ಕಾರ್ಯಾಚರಣೆಗಳ ಮೂಲಗಳಿಂದ ಹಿಡಿದು ಸುಧಾರಿತ ಬೆಳಕು, ಧ್ವನಿ ರೆಕಾರ್ಡಿಂಗ್, ಸಂಪಾದನೆ ಮತ್ತು ಬಣ್ಣ ಶ್ರೇಣೀಕರಣ ತಂತ್ರಗಳವರೆಗೆ. ವಿದ್ಯಾರ್ಥಿಗಳು ಕಥೆಗಳನ್ನು ದೃಶ್ಯೀಕರಿಸಲು, ಉತ್ಪಾದನಾ ಪರಿಸರವನ್ನು ನಿರ್ವಹಿಸಲು ಮತ್ತು ಪರಿಕಲ್ಪನೆಗಳನ್ನು ಸಿನಿಮೀಯ ದೃಶ್ಯಗಳಾಗಿ ಭಾಷಾಂತರಿಸಲು ಕಲಿಯುತ್ತಾರೆ 1 ವರ್ಷದ ಡಿಪ್ಲೊಮಾ, 3 ವರ್ಷದ ಪದವಿ ಅಥವಾ ಸ್ನಾತಕೋತ್ತರ ಕೋರ್ಸ್‌ಗಳ ಮೂಲಕ ಕ್ಯಾಮೆರಾ ಕಾರ್ಯಾಚರಣೆ, ಎಡಿಟಿಂಗ್ ಮತ್ತು ವೀಡಿಯೊ ನಿರ್ಮಾಣವನ್ನು ಕಲಿಯಬಹುದು. ಅರ್ಹತೆ ಸಾಮಾನ್ಯವಾಗಿ 10+2 (ಕಗಅ) ಆಗಿರುತ್ತದೆ.krnnivsa krn-nivsa +1 ಸಿನಿಮಾಟೋಗ್ರಫಿ ಕೋರ್ಸ್ ವಿವರಗಳು:ಕೋರ್ಸ್ ಪ್ರಕಾರಗಳು: ಡಿಪ್ಲೊಮಾ (1–2 ವರ್ಷಗಳು), ಸ್ನಾತಕೋತ್ತರ ಡಿಪ್ಲೊಮಾ (3 ವರ್ಷಗಳು), ಪದವಿ (3–4 ವರ್ಷಗಳು). ಅರ್ಹತೆ: ಯಾವುದೇ ವಿಷಯದಲ್ಲಿ 10+2 ಅಥವಾ ತತ್ಸಮಾನ ವಿದ್ಯಾರ್ಹತೆ.ಕಲಿಯುವ ವಿಷಯಗಳು: ಕ್ಯಾಮೆರಾ ಆಪರೇಷನ್, ಲೈಟಿಂಗ್ (ಬೆಳಕಿನ ವಿನ್ಯಾಸ), ಫ್ರೇಮಿಂಗ್, ಕಲರ್ ಗ್ರೇಡಿಂಗ್, ಲೆನ್ಸ್ ಬಳಕೆ, ಮತ್ತು ವಿಡಿಯೋ ಎಡಿಟಿಂಗ್.ಕೌಶಲ್ಯಗಳು: ಸೃಜನಾತ್ಮಕ ದೃಷ್ಟಿಕೋನ, ತಾಂತ್ರಿಕ ಜ್ಞಾನ, ಮತ್ತು ದೃಶ್ಯ ಕಥೆ ಹೇಳುವ ಸಾಮಥ–ರ್ಯ.ವೃತ್ತಿ ಅವಕಾಶಗಳು: ಸಿನಿಮಾಟೋಗ್ರಾಫರ್ (ಛಾಯಾಗ್ರಹಣ ನಿರ್ದೇಶಕ), ಕ್ಯಾಮೆರಾಮೆನ್, ಡೈರೆಕ್ಟರ್ ಆಫ್ ಫೋಟೋಗ್ರಫಿ (ಆಅಕ), ವಿಡಿಯೋಗ್ರಾಫರ್, ಮತ್ತು ಲೈಟಿಂಗ್ ತಂತ್ರಜ್ಞ.

## ವಿಶ್ವವಿದ್ಯಾಲಯ ಮಟ್ಟದ ಖೋ–ಖೋ ತಂಡಕ್ಕೆ ಆಯ್ಕೆ

ನೈಜ್ಯ ದೆಸೆ ನ್ಯೂಸ್



ತಾಳಿಕೋಟೆ: ಪಟ್ಟಣದ ಪ್ರತಿಷ್ಠಿತ ವಿದ್ಯಾ ಸಂಸ್ಥೆಗಳಲ್ಲಿ ಒಂದಾದ ಎಸ್.ಎಸ್.ವಿದ್ಯಾ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಶ್ರೀ ಎಚ್.ಎಸ್.ಪಾಟೀಲ ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳಾದ ವೀರೇಶ ಲೋಟಗೇರಿ ,ಉಮಾಕಾಂತ ಚವ್ಹಾಣ, ಧರ್ಮಣ್ಣ ಉಂಡಿ ಹಾಗೂ ಮೌಲಾಲಿ ಅತ್ತಾರ ಫೆ.25 ರಂದು ಎಂ.ಈ.ಎಸ್. ಕಲಾ ವಾಣಿಜ್ಯ ಹಾಗೂ ಬಿ.ಸಿ.ಎ ಪದವಿ ಮಹಾವಿದ್ಯಾಲಯ ಮೂಡಲಗಿಯಲ್ಲಿ ನಡೆದ ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ 2025–26 ನೇ ಸಾಲಿನ ಖೋ – ಖೋ ತಂಡದ ಆಯ್ಕೆ ಪ್ರಕ್ರಿಯೆಯಲ್ಲಿ ಈ ನಾಲ್ಕು ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ. ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಕೀರ್ತಿ ಹೆಚ್ಚಿಸಿದ್ದಕ್ಕಾಗಿ ಸಂಸ್ಥೆಯ ಅಧ್ಯಕ್ಷ ಎಚ್.ಎಸ್.ಪಾಟೀಲ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.ಕಾರ್ಯದರ್ಶಿ ಸಚಿನ್.ಎಚ್.ಪಾಟೀಲ ,ಆಡಳಿತಾಧಿಕಾರಿ ಕಿರಣ್.ಎಚ್.ಪಾಟೀಲ, ಹಾಗೂ ಪ್ರಾಚಾರ್ಯರಾದ ಶಿವಕುಮಾರ ನಾಯಕ, ಉಪನ್ಯಾಸಕನಎಂ ಎಸ್ ರಾಯಗೊಂಡ, ಶರಣು ಬಿರಾದಾರ, ಸಾಬಣ್ಣ ಮೇಟಿ, ಸಿಬ್ಬಂದಿ ವರ್ಗದವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಕಳಪೆ ಕಾಮಗಾರಿಯ ಬಿಲ್ ತಡೆಗೆ ರೈತ ಸಂಘ ಒತ್ತಾಯ



ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು ಮಾ. 3 : 2025–26ನೇ ಸಾಲಿನ 40 ಕ್ಲೋಸಿಂಗ್ ಕಾಮಗಾರಿಗಳು ಆರಂಭವಾಗಿದ್ದು, ಕಾಮಗಾರಿ ಸಂಪೂರ್ಣವಾಗಿ ಕಳಪೆಯಾಗಿದೆ. ಆದ್ದರಿಂದ ಗುತ್ತಿಗೆದಾರರಿಗೆ 2.52 ಕೋಟಿ ಬಿಲ್ ಪಾವತಿಯನ್ನು ತಡೆಹಿಡಿಯಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದ ಸದಸ್ಯರು ಒತ್ತಾಯಿಸಿ ಕೆಬಿಜೆ–ಎನ್ ಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಮನವಿ ಸಲ್ಲಿಸಿದರು.ಈ ಕಾಮಗಾರಿಗಳಿಂದ ರೈತ–ರಿಗೆ ಯಾವುದೇ ಪ್ರಯೋಜನವಿಲ್ಲ. ಕ್ಲೋಸಿಂಗ್ ಕಾಮಗಾರಿಯು ಗುತ್ತಿಗೆದಾರರ ಹಾಗೂ ಅಧಿಕಾ–ರಿಗಳ ಜೇಬು ತುಂಬಲು ಮಾಡಿದಂತಹ ಕಾಮಗಾ–ರಿಗಳಾಗಿವೆ. ಸರಕಾರದ ಹಣ ಲೂಟಿ ಮಾಡಲು ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಇಂತಹ ಕಾಮಗಾರಿಗಳಿಂದ ಯಾವುದೇ ಅಭಿವೃದ್ಧಿಯಾಗಲು ಸಾಧ್ಯವಿಲ್ಲ. ಆದ್ದರಿಂದ ಕೂಡಲೇ ಈ ಕಾಮಗಾರಿಯನ್ನು ತಡೆಹಿಡಿಯಬೇಕು ಹಾಗೂ 2.52 ಕೋಟಿ ಬಿಲ್ ಪಾವತಿಯನ್ನು ಸಹ ತಡೆಹಿಡಿಯಬೇಕು ಎಂದು ಅವರು ಒತ್ತಾಯಿಸಿದರು. ಎಪ್ರಿಲ್ ನಂತರ ಕಾಲುವೆಗಳಿಗೆ ನೀರು ಸ್ಥಗಿತಗೊಳಿಸಿದ ನಂತರ ಕಾಮಗಾರಿಯನ್ನು ಆರಂಭಿಸಬೇಕು. ರೈತರು ಜಮೀನುಗಳಲ್ಲಿ ಬೆಳೆಗಳನ್ನು ಬೆಳೆದಿದ್ದು, ಬೆಳೆಗಳು ಕೈಗೆ ಬರಲು ಏಪ್ರಿಲ್ 20ರ ವರೆಗೆ ಕಾಲುವೆಗೆ ನೀರು ಹರಿಸುವುದು ಅವಶ್ಯಕವಾಗಿದೆ. ಇಲ್ಲವಾದರೆ ಬೆಳೆಗಳು ನಾಶವಾಗಿ ರೈತರು ಸಂಕಷ್ಟ ಅನುಭವಿಸಲ್ಲಿದ್ದಾರೆ. ಕಾರಣ ಕೆಬಿಜೆಎನ್ ಎಲ್‌ನ ಎಲ್ಲಾ ಕಾಲುವೆಗಳಿಗೆ ಎಪ್ರಿಲ್ 20ರವರೆಗೆ ನೀರು ಹರಿಸಬೇಕೆಂದು ಅವರು ಮನವಿ ಮಾಡಿದರು. ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ, ಜಿಲ್ಲಾ ಕಾರ್ಯಾಧ್ಯಕ್ಷ ಆನಂದಕುಂಬಾರ್,ತಾಲೂಕು ಅಧ್ಯಕ್ಷದುರ್ಗಾಪ್ರಸಾದ, ಉಪಾಧ್ಯಕ್ಷ ಹನುಮನಗೌಡ ಸೇರಿದಂತೆ ಇದ್ದರು

# ಪ್ರತಿಯೊಬ್ಬ ವಿದ್ಯಾರ್ಥಿಗಳು ಪರೀಕ್ಷೆಯನ್ನು ಹಬ್ಬದಂತೆ ಸಂಭ್ರಮಿಸಿ : ಆಂಜನೇಯ ನಸಲಾಪುರ



ನೈಜ್ಯ ದೆಸೆ ನ್ಯೂಸ್

ಇವತ್ತಿನ ವಿದ್ಯಾರ್ಥಿಗಳಲ್ಲಿ ಪರೀಕ್ಷೆ ಒಂದು ದೊಡ್ಡ ಸಮಸ್ಯೆಯಾಗಿಬಿಟ್ಟಿದೆ. ಪರೀಕ್ಷೆಯನ್ನು ಎದುರಿಸುವ ಮನಸ್ಸಿಲ್ಲದವರಿಗೆ ಅದು ತುಂಬಾ ಕಷ್ಟಕರವಾಗಿ ಕಾಣುತ್ತದೆ. ಪರೀಕ್ಷೆಯ ಭಯ ಅಥವಾ ಆತಂಕವು ಅನೇಕ ವಿದ್ಯಾರ್ಥಿಗಳು ಎದುರಿಸುವ ಸಾಮಾನ್ಯ ಸಮಸ್ಯೆಯಾಗಿದೆ. ಇದು ಕಲಿತದ್ದನ್ನು ಮರೆಯುವಂತೆ ಮಾಡಿ, ಕಾರ್ಯಕ್ಷಮತೆಯ ಮೇಲೆ ಪರಿಣಾಮ ಬೀರುತ್ತದೆ. ಆದರೆ ಸರಿಯಾದ ತಂತ್ರಗಳನ್ನು ಅಳವಡಿಸಿಕೊಳ್ಳುವ ಮೂಲಕ ಈ ಭಯವನ್ನು ಸುಲಭವಾಗಿ ನಿವಾ–ರಿಸಬಹುದು.ಪರೀಕ್ಷಾ ಭಯದ ಲಕ್ಷಣಗಳು ಪರೀಕ್ಷಾ ಭಯವು ದೈಹಿಕ ಹಾಗೂ ಮಾನಸಿಕ ಲಕ್ಷಣಗಳನ್ನು ಹೊಂದಿರುತ್ತದೆ:ಹೃದಯದ ಬಡಿತ ಹೆಚ್ಚಾಗುವುದು ಬೆವರುವುದು, ನಡುಕ ವಾಕರಿಕೆ ಅಥವಾ ತಲೆನೋವು ಗೊಂದಲ, ಏಕಾಗ್ರತೆಯ ಕೊರತೆ ನಕಾರಾತ್ಮಕ ಆಲೋಚನೆಗಳು ನಿದ್ರಾಹೀನತೆ ಪರೀಕ್ಷಾ ಭಯ ನಿವಾರಣೆಯ ಮಾರ್ಗಗಳು 1. ಸಮರ್ಪಕ ತಯಾರಿ ಪರೀಕ್ಷಾ ಭಯ ನಿವಾರಣೆಗೆ ಅತ್ಯುತ್ತಮ ಮಾರ್ಗವೆಂದರೆ ನಿಯಮಿತ ಹಾಗೂ ಸಮರ್ಪಕ ತಯಾರಿ. ಸಮಯಪಟ್ಟಿ ರೂಪಿಸಿಕೊಂಡು ಪ್ರತಿದಿನ ಸ್ವಲ್ಪ ಸ್ವಲ್ಪ ಓದುವ ಅಭ್ಯಾಸ ಬೆಳೆಸಿಕೊಳ್ಳಿ. ಕೊನೆಯ ಕ್ಷಣದ ಓದು ಆತಂಕವನ್ನು ಹೆಚ್ಚಿಸುತ್ತದೆ.2. ಧನಾತ್ಮಕ ಆಲೋಚನೆ "ನನಗೆ ಆಗುವುದಿಲ್ಲ" ಎಂಬ ಯೋಚನೆಯ ಬದಲು "ನಾನು ಪ್ರಯತ್ನಿಸುತ್ತೇನೆ", "ನಾನು ಸಿದ್ಧನಾಗಿದ್ದೇನೆ" ಎಂಬ ಧನಾತ್ಮಕ ಮನೋಭಾವ ಬೆಳೆಸಿಕೊಳ್ಳಿ. ಆತ್ಮವಿಶ್ವಾಸವೇ ಯಶಸ್ಸಿನ ಮೂಲ.3. ಆಳವಾದ ಉಸಿರಾಟದ ವ್ಯಾಯಾಮ ಪರೀಕ್ಷೆಗೆ ಮುನ್ನ ಅಥವಾ ಪರೀಕ್ಷೆಯ ಸಮಯದಲ್ಲಿ ಆತಂಕವಾದರೆ, ಆಳವಾದ ಉಸಿರಾಟದ ವ್ಯಾಯಾಮ ಮಾಡಿ. ಇದು ಮನಸ್ಸನ್ನು ಶಾಂತಗೊಳಿಸಿ ಏಕಾಗ್ರತೆಯನ್ನು ಹೆಚ್ಚಿಸುತ್ತದೆ.4. ಸಾಕಷ್ಟು ನಿದ್ರೆ ಮತ್ತು ಪೌಷ್ಟಿಕ ಆಹಾರ ಪರೀಕ್ಷೆಗೆ ಮುನ್ನ ಚೆನ್ನಾಗಿ ನಿದ್ರೆ ಮಾಡಿ. ಪೌಷ್ಟಿಕ ಆಹಾರ ಸೇವಿಸಿ. ಖಾಲಿ ಹೊಟ್ಟೆಯಲ್ಲಿ ಅಥವಾ ಅತಿಯಾಗಿ ತಿಂದು ಪರೀಕ್ಷೆಗೆ ಹೋಗಬೇಡಿ.5. ವಾಸ್ತವಿಕ ನಿರೀಕ್ಷೆಗಳು ಪ್ರತಿಯೊಬ್ಬರಲ್ಲೂ ವಿಭಿನ್ನ ಸಾಮರ್ಥ್ಯಗಳಿವೆ. ನಿಮ್ಮಿಂದ ಸಾಧ್ಯವಾದಷ್ಟು ಉತ್ತಮವಾಗಿ ಮಾಡಲು ಪ್ರಯತ್ನಿಸಿ. ಪರಿಪೂರ್ಣತೆಯ ಒತ್ತಡವನ್ನು ತಪ್ಪಿಸಿ.6. ವಿಶ್ರಾಂತಿ ತಂತ್ರಗಳು ಯೋಗ, ಧ್ಯಾನ, ಸಂಗೀತ ಕೇಳುವುದು ಮುಂತಾದ ತಂತ್ರಗಳು ಮಾನಸಿಕ ಒತ್ತಡವನ್ನು ಕಡಿಮೆ ಮಾಡಲು ಸಹಾಯಕ.7. ಸಮಯ ನಿರ್ವಹಣೆ ಪರೀಕ್ಷಾ ಸಮಯದಲ್ಲಿ ಪ್ರತೀ ಪ್ರಶ್ನೆಗೆ ಎಷ್ಟು ಸಮಯ ನೀಡಬೇಕು ಎಂದು ಯೋಜಿಸಿ. ಸುಲಭ ಪ್ರಶ್ನೆಗಳಿಗೆ ಮೊದಲು ಉತ್ತರಿಸಿ, ನಂತರ ಕಠಿಣ ಪ್ರಶ್ನೆಗಳತ್ತ ತಿರುಗಿ.ಪರೀಕ್ಷಾ ದಿನದ ಸಲಹೆಗಳು ಬೇಗ ಎದ್ದು, ಸಮಯಕ್ಕೆ ಸರಿಯಾಗಿ ಪರೀಕ್ಷಾ ಕೇಂದ್ರಕ್ಕೆ ತಲುಪಿ ಸ್ನೇಹಿತರೊಂದಿಗೆ ಅತಿಯಾದ ಚರ್ಚೆಯನ್ನು ತಪ್ಪಿಸಿ ಪ್ರಶ್ನೆಪತ್ರಿಕೆಯನ್ನು ಗಮನದಿಂದ ಓದಿ ಉತ್ತರ ಬರೆಯುವ ಮೊದಲು 2–3 ನಿಮಿಷ ಯೋಜನೆ ರೂಪಿಸಿ ಆತಂಕವಾದರೆ ಕಣ್ಣು ಮುಚ್ಚಿ ಆಳವಾಗಿ ಉಸಿರಾಡಿ ಪರೀಕ್ಷೆಯ ಭಯ ಸಹಜ. ಆದರೆ ಅದು ನಿಮ್ಮನ್ನು ನಿಯಂತ್ರಿಸದಂತೆ ನೋಡಿಕೊಳ್ಳಿ. ಸರಿಯಾದ ತಯಾರಿ, ಧನಾತ್ಮಕ ದೃಷ್ಟಿಕೋನ ಮತ್ತು ಶಾಂತ ಮನಸ್ಸಿನ ಮೂಲಕ ನೀವು ಈ ಭಯವನ್ನು ಜಯಿಸಬಹುದು. ನಿಮ್ಮ ಪ್ರಯತ್ನವೇ ಮುಖ್ಯ, ಫಲಿತಾಂಶವಲ್ಲ.ಕಲಿಸಿದ ಗುರುಗಳಿಗೂ, ತಂದೆ–ತಾಯಿಗಳಿಗೂ ಕೀರ್ತಿಯನ್ನು ತರುವಂತಹ ವಿದ್ಯಾರ್ಥಿಗಳಾಗಿರಿ ಎಂಬ ಹಾರೈಕೆ.– ಆಂಜನೇಯ ನಸಲಾಪುರ ಉಪನ್ಯಾಸಕರು ಮತ್ತು ಸಂಪನ್ಮೂಲ ವ್ಯಕ್ತಿ

# ಮುದ್ದೇಬಿಹಾಳದಲ್ಲಿ ಒಳಮೀಸಲಾತಿ ಜಾರಿ ಒತ್ತಾಯ: ಸದಾಶಿವ ಆಯೋಗ ವರದಿ ಯಥಾವತ್ತಾಗಿ ಜಾರಿಗೆ ಆಗ್ರಹ

ನೈಜ್ಯ ದೆಸೆ ನ್ಯೂಸ್

ಮುದ್ದೇಬಿಹಾಳ: ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಸಂಬಂಧಿಸಿದಂತೆ ಮಾದಿಗ ಸಂಘಟನೆಗಳ ಒಕ್ಕೂಟ ಮುಖಂಡರು ಶನಿವಾರ ಪತ್ರಿಕಾ ಹೇಳಿಕೆ ನೀಡಿದರು. ಸದಾಶಿವ ಆಯೋಗದ ವರದಿಯನ್ನು ಯಥಾವತ್ತಾಗಿ ಜಾರಿಗೆ ತರಬೇಕು ಎಂದು ಅವರು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡ ತಿಪ್ಪಣ್ಣ ದೊಡಮನಿ, ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ನೊಂದ ಸಮುದಾಯಗಳ ಧ್ವನಿಯಾಗಬೇಕು ಎಂದು ಒತ್ತಾಯಿಸಿದರು. ಸಂವಿಧಾನ ಮತ್ತು ಸಾಮಾಜಿಕ ನ್ಯಾಯದ ಪರ ನಿಲುವು ಹೊಂದಿರುವ ಸರ್ಕಾರ ಒಳಮೀಸಲಾತಿ ವಿಚಾರದಲ್ಲಿ ಸ್ಪಷ್ಟ ಹಾಗೂ ದೃಢ ತೀರ್ಮಾನ ಕೈಗೊಳ್ಳಬೇಕಾಗಿತ್ತು. ಆದರೆ ವರದಿಯನ್ನು ಸಂಪೂರ್ಣವಾಗಿ ಜಾರಿ ಮಾಡದಿರುವುದು ಸಮುದಾಯಗಳಲ್ಲಿ ನಿರಾಶೆ ಮೂಡಿಸಿದೆ ಎಂದು ದೂರಿದರು.ಸದಾಶಿವ ಆಯೋಗದ ವರದಿ ಪ್ರಕಾರ 15:15 ಅನುಪಾತದಲ್ಲಿ ಒಳಮೀಸಲಾತಿ ನೀಡಬೇಕೆಂದು ಶಿಫಾರಸು ಮಾಡಲಾಗಿದೆ. ಈ ಕುರಿತು ರಾಜ್ಯಪಾಲರ ಅಂಕಿತ ಹಾಗೂ ಅನುಮೋದನೆ ಈಗಾಗಲೇ ಲಭಿಸಿರುವುದರಿಂದ ಯಾವುದೇ ವಿಳಂಬವಿಲ್ಲದೆ ಜಾರಿಗೆ ತರಬೇಕು ಎಂದು ಅವರು ಹೇಳಿದರು.ಸರ್ಕಾರ ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ನಿರ್ಧರಿಸಿರುವ ಸಂದರ್ಭದಲ್ಲಿ, ಸದಾಶಿವ ಆಯೋಗದ ಶಿಫಾರಸುಗಳನ್ನು ಅನುಸ–ರಿಸದೆ ನೇಮಕಾತಿ ನಡೆಸಿದರೆ ಸಮುದಾಯ ಬೀದಿಗಿಳಿದು ಉಗ್ರ ಹೋರಾಟ ನಡೆಸುವ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಎಚ್ಚ–ರಿಸಿದರು.ಮೀಸಲಾತಿ ವರದಿಯನ್ನು ಸಂಪೂರ್ಣ ಜಾರಿಗೆ ತರದಿರುವುದರಿಂದ ಅವಕಾಶವಂಚಿತ ಸಮುದಾಯಗಳಲ್ಲಿ ಅಸಮಾಧಾನ ಹೆಚ್ಚುತ್ತಿದೆ. ಆಂಧ್ರ ಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳಲ್ಲಿ ತ್ವರಿತ ಕ್ರಮ ಕೈಗೊಂಡಿರುವುದನ್ನು ಉದಾಹರಿಸಿ, ಕರ್ನಾಟಕದಲ್ಲಿ ಮಾತ್ರ ವಿಳಂಬ ಏಕೆ ಎಂಬ ಪ್ರಶ್ನೆ ಉದ್ಭವಿಸಿದೆ ಎಂದು ಹೇಳಿದರು.ನೇರ ನೇಮಕಾತಿ, ಪದೋನ್ನತಿ, ಬ್ಯಾಕ್‌ಲಾಗ್ ಹುದ್ದೆಗಳು ಹಾಗೂ ಸರ್ಕಾರಿ ಗುತ್ತಿಗೆ ಸೇ–ರಿದಂತೆ ಎಲ್ಲ ವಲಯಗಳಲ್ಲಿ ಒಳಮೀಸಲಾತಿ ಜಾರಿ ಮಾಡಬೇಕು. ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನವನ್ನು 6:6:5 ಅನುಪಾತದಲ್ಲಿ ಹಂಚಿಕೆ ಮಾಡಬೇಕು. ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕ ಶೇ.1 ಮೀಸಲಾತಿ, ಪ್ರತ್ಯೇಕ ನಿಗಮ ಹಾಗೂ ವಿಶೇಷ ಪ್ಯಾಕೇಜ್ ಘೋಷಿಸಬೇಕು. ಜೊತೆಗೆ ಶಾಶ್ವತ ಆಯೋಗ ರಚನೆ ಹಾಗೂ ಮೀಸಲಾತಿ ಪ್ರಮಾಣ ಹೆಚ್ಚಳಕ್ಕೂ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಒಳಮೀಸಲಾತಿ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ಹಿಂಪಡೆಯಬೇಕು. ಆದಿಜಾಂಬವ ಅಭಿವೃದ್ಧಿ ನಿಗಮ, ಚರ್ಮ ಕೈಗಾರಿಕಾ ಅಭಿವೃದ್ಧಿ ಮಂಡಳಿ ಹಾಗೂ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಗೆ ತಲಾ ₹2,000 ಕೋಟಿ ಅನುದಾನ ನೀಡಬೇಕು ಎಂದು ಪತ್ರಿಕಾ ಹೇಳಿಕೆಯಲ್ಲಿ ಒತ್ತಾಯಿಸಲಾಗಿದೆ



# ಕೆಎಂಎಫ್ ಅಧ್ಯಕ್ಷ ಚುನಾವಣೆ ಮುಂದೂಡಿಕೆ

ನೈಜ್ಯ ದೆಸೆ ನ್ಯೂಸ್

ರಾಜ್ಯ ರಾಜಕೀಯದಲ್ಲಿ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತ (ಕೆಎಂ–ಎಫ್) ಚುನಾವಣೆ ಪ್ರತಿಷ್ಠೆಯ ಪ್ರಶ್ನೆಯಾಗಿದೆ. ಕೆ–ಎಂಎಫ್ ಅಧ್ಯಕ್ಷರು ಯಾರಾಗಬೇಕು? ಎಂಬ ಕು–ರಿತು ಇನ್ನೂ ಸಹ ಒಮ್ಮತ ಮೂಡಿಲ್ಲ. ಆದ ಕಾರಣ ಮಾರ್ಚ್ 6ರಂದು ನಿಗದಿಯಾಗಿದ್ದ ಚುನಾವಣೆ ಮುಂದೂಡಿಕೆಯಾಗಲಿದೆ.ಕೆಎಂಎಫ್ ಅಧ್ಯಕ್ಷರ ಆಯ್ಕೆಗೆ ಮಾರ್ಚ್ 6ರ ಶುಕ್ರವಾರ ಚುನಾವಣೆ ನಡೆಯಬೇಕಿತ್ತು. ಆದರೆ ಅಂದು ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಕರ್ನಾಟಕ ಬಜೆಟ್ 2026 ಮಂಡನೆ ಮಾಡಲಿದ್ದಾರೆ.ಬಜೆಟ್ ಅಧಿವೇಶನದಲ್ಲಿ ಕೆ–ಎಂಎಫ್ ನಿರ್ದೇಶಕರೂ ಆಗಿರುವ ಹಲವು ಶಾಸಕರು ಪಾಲ್ಗೊಳ್ಳಬೇಕಿದೆ. ಆದ್ದರಿಂದ ಮಾರ್ಚ್ 6ಕ್ಕೆ ನಿಗದಿಯಾಗಿದ್ದ ಚುನಾವಣೆ ಮುಂದಕ್ಕೆ ಹೋಗಲಿದೆ. ಅಲ್ಲದೇ ಅಧ್ಯಕ್ಷ ಹುದ್ದೆ ಯಾರಿಗೆ? ಎಂಬ ಕು–ರಿತು ಇನ್ನೂ ಸಹ ಒಮ್ಮತ ಮೂಡಿಲ್ಲ.ಆಕಾಂಕ್ಷಿಗಳು ಯಾರು?; ಕೆಎಂಎಫ್ ಅಧ್ಯಕ್ಷ ಹುದ್ದೆಗೆ ಬಮೂಲ್ ಅಧ್ಯಕ್ಷ, ಡಿ.ಕೆ.ಶಿವಕುಮಾರ್ ಸಹೋದರ ಡಿ.ಕೆ.ಸುರೇಶ್, ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿಯಮಿತದ ಅಧ್ಯಕ್ಷ ಹಾಗೂ ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಮತ್ತು ಮಾಲೂರು ಶಾಸಕ ಕೆ.ವೈ.ನಂಜೇಗೌಡ ಪ್ರಬಲ ಆಕಾಂಕ್ಷಿಗಳು.ಕೆ–ಎಂಎಫ್ ಅಧ್ಯಕ್ಷ ಹುದ್ದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣದ ನಾಯಕರಿಗೋ?, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಹೋದರನಿಗೋ? ಎಂಬುದು ಇನ್ನೂ ಅಂತಿಮವಾಗಿಲ್ಲ. ಡಿ.ಕೆ.ಶಿವಕುಮಾರ್ ಡಿ.ಕೆ.ಸುರೇಶ್ ಕೆಎಂಎಫ್ ಅಧ್ಯಕ್ಷರಾಗಬೇಕು ಎಂದು ಬಯಸಿದ್ದಾರೆ.ಮಾರ್ಚ್ 6ರಂದು ಕೆಎಂಎಫ್ ಅಧ್ಯಕ್ಷ ಚುನಾವಣೆ ನಡೆಸಬಹುದು ಎಂದು ಸಹಕಾರ ಚುನಾವಣಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ಕೆಎಂಎಫ್‌ನ 5 ನಿರ್ದೇಶಕರು ಶಾಸಕರಾದ ಕಾರಣ ಅವರು ಬಜೆಟ್ ಅಧಿವೇಶನದಲ್ಲಿ ಪಾಲ್ಗೊಳ್ಳಬೇಕಾದ ಕಾರಣ ಅಂದು ಚುನಾವಣೆ ನಡೆಸುವುದಿಲ್ಲ.ಹೆಚ್.ಡಿ.ರೇವಣ್ಣ (ಹಾಸನ ಒಕ್ಕೂಟ), ಬಾಲಚಂದ್ರ ಜಾರಕಿಹೊಳಿ (ಬೆಳಗಾವಿ ಒಕ್ಕೂಟ), ಕೆ.ವೈ.ನಂಜೇಗೌಡ (ಕೋಲಾರ ಒಕ್ಕೂಟ), ರಾಘವೇಂದ್ರ ಹಿಟ್ನಾಳ ( ಬಳ್ಳಾರಿ, ರಾಯಚೂರು, ಕೊಪ್ಪಳ ಒಕ್ಕೂಟ), ಎಚ್.ವಿ.ವೆಂಕಟೇಶ್ (ತುಮಕೂರು ಒಕ್ಕೂಟ)ದ ಕೆಎಂಎಫ್ ನಿರ್ದೇಶಕರು. ಇವರೆಲ್ಲರೂ ವಿಧಾನಸಭೆ ಅಧಿವೇಶನದಲ್ಲಿ ಪಾಲ್ಗೊಳ್ಳಬೇಕಾದ ಕಾರಣ ಚುನಾವಣೆ ಮುಂದೂಡಿಕೆಯಾಗಲಿದೆ.ಕೆ–ಎಂಎಫ್ ಈ ಹಿಂದಿನ ಆಡಳಿತ ಮಂಡಳಿ ಅವಧಿ 2024ರ ಜುಲೈ 7ಕ್ಕೆ ಮುಕ್ತಾಯಗೊಂಡಿದೆ. ಆಗ 2024ರ ಲೋಕಸಭೆ ಚುನಾವಣೆ ಎದುರಾದ ಕಾರಣ ಆಡಳಿತಾಧಿಕಾರಿ ನೇಮಕ ಮಾಡದೇ ಹಳೇ ಮಂಡಳಿಯನ್ನು ಮುಂದುವರೆಸಲಾಗಿತ್ತು.2025ರ ಜೂನ್ 4ರಂದು ಟಿ.ಎಚ್.ಎಂ.ಕುಮಾರ್ ಅವರನ್ನು ಕೆಎಂಎಫ್ ಆಡಳಿತಾಧಿಕಾರಿಯಾಗಿ ನೇಮಕ ಮಾಡಲಾಗಿದೆ. ಆದರೆ ಅಧ್ಯಕ್ಷರ ಆಯ್ಕೆಗೆ ಇನ್ನೂ ಸಹ ಕಾಲ ಕೂಡಿ ಬಂದಿಲ್ಲ.




# ರಾಯಚೂರು ಗ್ರಾಮೀಣ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರಕ್ಕೆ ಪ್ರಸ್ತಾವನೆ




ನೈಜ್ಯ ದೆಸೆ ನ್ಯೂಸ್

ರಾಯಚೂರು : ತೆಲಂಗಾಣ ಹಾಗೂ ಆಂಧ್ರಪ್ರದೇಶದೊಂದಿಗೆ ಗಡಿ ಹಂಚಿಕೊಂಡಿರುವ ರಾಯಚೂರು ಗ್ರಾಮೀಣ ವಿಧಾನ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೆ ಸಾರ್ವಜನಿಕರಿಂದ ಹೆಚ್ಚಿನ ಒತ್ತಡ ಬಂದಿದೆ. ಈ ಬಾರಿ ಈ ಕ್ಷೇತ್ರದಿಂದಲೇ ಹೆಚ್ಚಿನ ಪ್ರಸ್ತಾವಗಳು ರಾಜ್ಯ ಸರ್ಕಾರಕ್ಕೆ ಸಲ್ಲಿಕೆಯಾಗಿವೆ.ವಿಮಾನ ನಿಲ್ದಾಣವು ರಾಯಚೂರು ಹೊರವಲಯದಲ್ಲಿದ್ದರೂ ಗ್ರಾಮೀಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲೇ ಇದೆ. ಈಗಾಗಲೇ ವಿಮಾನ ನಿಲ್ದಾಣ ಕಾಮಗಾರಿ ಭರದಿಂದ ಸಾಗಿದೆ. ರಾಯಚೂರು ಅತ್ಯಂತ ಹಳೆಯ ಜಿಲ್ಲೆಯಾದರೂ ಇಲ್ಲಿ ವಿಮಾನ ನಿಲ್ದಾಣವೇ ಇರಲಿಲ್ಲ. ಇಲ್ಲಿಂದ ವಿಮಾನ ಹಾರಾಟ ಶುರುವಾಗಲು ಕನಿಷ್ಠ ಮೂರು ವರ್ಷಗಳಾದರೂ ಬೇಕಾಗಲಿದೆ ಎನ್ನುವುದು ಜಿಲ್ಲೆಯ ಜನರ ಅನಿಸಿಕೆಯಾಗಿದೆ.ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯವೂ ಇದೇ ಕ್ಷೇತ್ರದಲ್ಲಿದೆ. ಮೂಲಸೌಕರ್ಯ ಹಾಗೂ ಅನುದಾನ ಕೊರತೆಯಿಂದ ಸೊರಗ ತೊಡಗಿದೆ. ಈ ಬಾರಿಯ ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ನಿರೀಕ್ಷಿಸಲಾಗಿದೆ. ರಾಯಚೂರು ತಾಲ್ಲೂಕನ್ನು ವಿಭಜನೆ ಮಾಡಿ, ರಾಯಚೂರು ಗ್ರಾಮೀಣ ಅಥವಾ ಯರಗೇರಾ ತಾಲ್ಲೂಕು ಘೋಷಣೆ ಮಾಡಬೇಕು ಎನ್ನುವ ಬೇಡಿಕೆ ಮುನ್ನಲೆಗೆ ಬಂದಿದೆ. ಇದು ಅಗತ್ಯವೂ ಇದೆ. ಸರ್ಕಾರದ ಮಟ್ಟದಲ್ಲಿ ತಾಲ್ಲೂಕು ಪುನರ್ ಪರಿಶೀಲನೆ ಕಾರ್ಯವೂ ನಡೆದಿದೆ ಎನ್ನಲಾಗಿದೆ. ಬಜೆಟ್‌ನಲ್ಲಿ ಅಧಿಕೃತವಾಗಿ ಘೋಷಣೆಯಾದರೆ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚು ಅನುಕೂಲವಾಗಲಿದೆ ಎನ್ನುವುದು ಹಲವರ ಅಭಿಪ್ರಾಯವಾಗಿದೆ.ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಅನೇಕ ಧಾರ್ಮಿಕ ಹಾಗೂ ಐತಿಹಾಸಿಕ ತಾಣಗಳು ಇದ್ದರೂ ಹಲವು ಕಾರಣಗಳಿಂದ ಅಭಿವೃದ್ಧಿ ಕಂಡಿಲ್ಲ.ಇವುಗಳ ಅಭಿವೃದ್ಧಿಗೂ ಹೆಚ್ಚಿನ ಅನುದಾನ ನಿರೀಕ್ಷಿಸಲಾಗಿದೆ. ಪ್ರವಾಸೋದ್ಯಮ ಇಲಾಖೆಯಿಂದಲೂ ಅಭಿವೃದ್ಧಿಗೆ ನೆರವು ದೊರಕಿಲ್ಲ. ಹೀಗಾಗಿ ಈ ಕ್ಷೇತ್ರದ ಜನ ರಾಜ್ಯದ ಸರ್ಕಾರದ ಮೇಲೆ ಹೆಚ್ಚಿನ ನಿರೀಕ್ಷೆ ಇಟ್ಟುಕೊಂಡಿದ್ದಾರೆ.'ರಾಯಚೂರು ಗ್ರಾಮಾಂತರ ಪ್ರದೇಶದಲ್ಲಿರುವ ಯಾರಗೇರಾ ಹೋಬಳಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಅನುಮೋದನೆ ಕೊಡಬೇಕು. ಬಸ್ ನಿಲ್ದಾಣ ಮಂಜೂರು ಮಾಡಬೇಕು , ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯಕ್ಕೆ ಹೆಚ್ಚಿನ ಅನುದಾನ ಕೊಡಬೇಕು. ಕೃಷ್ಣೆ ನದಿಯಿಂದ ಗ್ರಾಮಾಂತರ ಭಾಗದಲ್ಲಿ ಕೆರೆಗಳಿಗೆ ನೀರು ತುಂಬಿಸುವ ಪ್ರಕ್ರಿಯೆಗೆ ಅನುಮದನೆ ನೀಡಬೇಕು. ಗ್ರಾಮೀಣ ಭಾಗದ ರಸ್ತೆಗಳ ದುರಸ್ತಿಗೆ ಅನುಮೋದನೆ ನೀಡಬೇಕು' ಎಂದು ಸಿಪಿಐಎಂ–ಎಲ್ ಲಿಬರೇಶನ್ ಜಿಲ್ಲಾ ಮುಖಂಡ ಅಜೀಜ್ ಜಾಗೀರದಾರ್ ಒತ್ತಾಯಿಸುತ್ತಾರೆ.ರಂಗನಾಥ ಪೊಲೀಸ್ ಪಾಟೀಲ ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಅತಿ ಹಿಂದುಳಿದಿರುವ ರಾಯಚೂರು ತಾಲ್ಲೂಕಿನ ಐತಿಹಾಸಿಕ ತಾಣಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಬಜೆಟ್‌ನಲ್ಲಿ ವಿಶೇಷ ಅನುದಾನ ಕೊಡಬೇಕು. ಇದು ಗ್ರಾಮೀಣ ಕ್ರೇತ್ರದ ಅಭಿವೃದ್ಧಿಗೆ ಪೂರಕವಾಗಲಿದೆ.ಭಗತರಾಜ ನಿಜಾಮಕಾರಿ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾಯಚೂರು ಬಹುಭಾಷಿಕ ಹಾಗೂ ಬಹು ಸಂಸ್ಕೃತಿಯ ಜಿಲ್ಲೆಯಾಗಿದೆ. ಐದು ವರ್ಷದ ಅವಧಿಯಲ್ಲಿ ಒಂದು ಬಾರಿಯಾದರೂ ರಾಯಚೂರು ಗಡಿಯಲ್ಲಿ ಗಡಿನಾಡು ಉತ್ಸವ ನಡೆಸಲು ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಅನುದಾನ ಮೀಸಲಿಡಬೇಕು. ₹500 ಕೋಟಿ ಅಂದಾಜು ವೆಚ್ಚದ ಯೋಜನೆಗಳ ಪ್ರಸ್ತಾವ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರವು ಹಿಂದುಳಿದಿರುವ ಕಾರಣ ವಿವಿಧ ಯೋಜನೆಗಳ ಅಡಿ ಅನುದಾನ ಕೋರಿ ಸುಮಾರು ₹ 500 ಕೋಟಿ ಮೊತ್ತದ ಯೋಜನೆಗಳ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಶಾಸಕರೂ ಆದ ರಾಜ್ಯ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಹೇಳುತ್ತಾರೆ. ರಾಯಚೂರು ತಾಲ್ಲೂಕಿನ ವ್ಯಾಪ್ತಿ ದೊಡ್ಡದಾಗಿದೆ. ಹೀಗಾಗಿ ಯರಗೇರಾ ತಾಲ್ಲೂಕು ಘೋಷಣೆ ಮಾಡಬೇಕು. ಪ್ರೆಸ್ಸಿಂಗ್‌ನಲ್ಲಿ ಗುಜರಾತದ ಅಹಮದಾಬಾದ್ ಮೊದಲ ಸ್ಥಾನದಲ್ಲಿದ್ದರೆ ರಾಯಚೂರು ನಂತರದ ಸ್ಥಾನದಲ್ಲಿದೆ. ಇದಕ್ಕಾಗಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್ ಮಂಜೂರು ಮಾಡಬೇಕು. ರಾಯಚೂರು ಚಂದ್ರಬಂಡಾ ಸಮೀಪದ 400 ಎಕರೆ ಪ್ರದೇಶ ಗುರುತಿಸಲಾಗಿದೆ. ಸರ್ಕಾರ ಟೆಕ್ಸ್‌ಟೈಲ್ ಪಾರ್ಕ್ ಮಂಜೂರು ಮಾಡಿದರೆ ಜಿಲ್ಲೆಯ 10 ಸಾವಿರ ಜನರಿಗೆ ಉದ್ಯೋಗ ಸಿಗಲಿದೆ ಎನ್ನುತ್ತಾರೆ. ತುಂಗಭದ್ರಾ ನದಿ ನೀರು ಬಳಸಿಕೊಳ್ಳಲು ₹200 ಕೋಟಿ ಅಂದಾಜು ವೆಚ್ಚದ ಮಟಮಾರಿ ಸಮೀಪ ವೀರಭದ್ರದೇಶ್ವರ ಏತ ನೀರಾವರಿ ಯೋಜನೆ ಕೃಷ್ಣಾ ನದಿಯಿಂದ 15 ಕೆರೆ ತುಂಬಿಸುವ ಯೋಜನೆ ಪ್ರಸ್ತಾವ ಕೊಡಲಾಗಿದೆ. ಜಾಗೀರ್ ವೆಂಕಟಾಪುರ ಯರಗೇರಾ ಈರಾಪುರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸಬೇಕು. ರಾಯಚೂರು ತಾಲ್ಲೂಕಿನ ಕುರಡಿ ಕಲ್ಮಲಾದ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಬೇಕು. ಗಿಲ್ಲೇಸೂರು ಹಾಗೂ ದೇವಸುಗೂರಿಗೆ ಪ್ರತ್ಯೇಕ ಎರಡು ಪದವಿ ಕಾಲೇಜುಗಳನ್ನು ಮಂಜೂರು ಮಾಡಬೇಕು ಎಂದು ಮನವಿ ಮಾಡಲಾಗಿದೆ. ಕ್ಷೇತ್ರದ ವಿದ್ಯಾರ್ಥಿ ಸಮುದಾಯವನ್ನು ಗಮನದಲ್ಲಿ ಇರಿಸಿಕೊಂಡು ಒಟ್ಟು ಆರು ಹಾಸ್ಟೆಲ್‌ಗಳನ್ನು ಮಂಜೂರು ಮಾಡುವಂತೆ ಮುಖ್ಯಮಂತ್ರಿ ಅವರಿಗೆ ಮನವಿಪತ್ರ ಸಲ್ಲಿಸಲಾಗಿದೆ ಎಂದು ತಿಳಿಸುತ್ತಾರೆ. ರಾಯಚೂರು ತಾಲ್ಲೂಕಿನ ನಾರದಗಡ್ಡೆ ಕುರುವಾಪುರ ದತ್ತಾತ್ರೇಯ ನಡುಗಡ್ಡೆ ಪಂಚಮುಖಿ ಕ್ಷೇತ್ರದ ಅಭಿವೃದ್ಧಿಗಾಗಿ ಡಿಪಿಆರ್ ಸಿದ್ಧಪಡಿಸಿ ರಾಜ್ಯ ಸರ್ಕಾರದ ಮೂಲಕ ಪ್ರಸಾದ ಯೋಜನೆಯಡಿ ಕೇಂದ್ರಕ್ಕೂ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಹೇಳುತ್ತಾರೆ.